ವಿಜಯಪುರ | ಸಂಪುಟ 04 | ಸಂಚಿಕೆ 208 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಅಕ್ಟೋಬರ್, 10, 2026

"ಇಷ್ಟು ದಿನ ಸಿಎಂ ಡಿಕೆ ಶಿವಕುಮಾರ್ ಭರವಸೆ ಕೊಡುತ್ತಿದ್ದಾರೆ ಎನ್ನಲಾಗಿತ್ತು. ಈಗ ನೋಡಿದರೆ ಗಾಳಿಯಲ್ಲಿ ಗುಂಡು ಹಾರಿಸುವ ಕೆಲಸ ಮಾಡ್ತಿದ್ದಾರೆ. ಸಂಪುಟಸಭೆಯಲ್ಲಿ ಸಚಿವರನ್ನ ಟ್ರ್ಯಾಪ್ ಮಾಡ್ತಿದ್ದಾರೆ ಎಂದು ಹೇಳಿದ್ದಾರೆ. ಕಾನೂನು ಸುವ್ಯವಸ್ಥೆ ಕಾಪಾಡಬೇಕಿರುವ ಮುಖ್ಯಮಂತ್ರಿಗಳೇ ಅಸಹಾಯಕ ಸ್ಥಿತಿಯಲ್ಲಿ ನನ್ನ ಮೇಲೆ ಟ್ರ್ಯಾಪ್ ಆಗಿದೆ ಅಂತಿದ್ದಾರೆ."



■ ಆರ್.ಅಶೋಕ
ವಿಧಾನಸಭೆ ವಿಪಕ್ಷ ನಾಯಕರು

## ಸಿಂದಗಿಯಲ್ಲಿ ಸೇವಾ ಸಂಕಲ್ಪ ಹಾಗೂ ಬೂತ್ ವಿಜಯ ಸಂಕಲ್ಪ ಯಾತ್ರೆ ಕಾರ್ಯಕ್ರಮಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಚಾಲನೆ | ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ನಾಯಕರ ವಾಗ್ದಾಳಿ

# ಬರ ನಿರ್ವಹಣೆ: ರಾಜ್ಯ ಸರ್ಕಾರ ಸಂಪೂರ್ಣ ವಿಫಲ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ರಾಜ್ಯದಲ್ಲಿ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದ್ದು, ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿವೆ. ನಿರುದ್ಯೋಗ, ರೈತರ ಸಮಸ್ಯೆಗಳು ಹಾಗೂ ಬರಗಾಲ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಸಿಂದಗಿ ನಗರದ ಮಾಂಗಲ್ಯ ಭವನದಲ್ಲಿ ಹಮ್ಮಿಕೊಂಡ ಸೇವಾ ಸಂಕಲ್ಪ ಹಾಗೂ ಬೂತ್ ವಿಜಯ ಸಂಕಲ್ಪ ಯಾತ್ರೆ ಕಾರ್ಯಕ್ರಮಕ್ಕೆ ಡೊಳ್ಳು ಬಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೆ ಯುವಕರ ಭವಿಷ್ಯದೊಂದಿಗೆ ಸರ್ಕಾರ ಚೆಲ್ಲಾಟವಾಡುತ್ತಿದೆ. ಇದರಿಂದ ಯುವಕರಲ್ಲಿ ಆಕ್ರೋಶ ಹೆಚ್ಚಾಗುತ್ತಿದೆ. ಮತ್ತೊಂದೆಡೆ ಬರಗಾಲದಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಹಿತ ಕಾಪಾಡುವಲ್ಲಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದೂರಿದರು. ರೈತರ ಸಂಕಷ್ಟ ನಿವಾರಿಸುವ ನಿಟ್ಟಿನಲ್ಲಿ ರೂ.5ಲಕ್ಷದವರೆಗಿನ ಕೃಷಿ ಸಾಲ ಮನ್ನಾ ಮಾಡಬೇಕು. ಕೃಷಿ ಚಟುವಟಿಕೆಗಳಿಗೆ ಸಮರ್ಪಕವಾಗಿ ತ್ರಿಫೇಸ್ ವಿದ್ಯುತ್ ಪೂರೈಸಬೇಕು. ರಾಜ್ಯದಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳು ನಡೆಯುತ್ತಿರುವುದು ಆತಂಕಕಾರಿ ಸಂಗತಿಯಾಗಿದ್ದು, ರೈತರ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ಮೋದಿ ಅವರ 25ವರ್ಷಗಳ ಸಾರ್ವಜನಿಕ ಜೀವನದ ಸಂಭ್ರಮಾಚರಣೆ: ಸೆ.17 ರಿಂದ ಅ.17ರವರೆಗೆ ದೇಶಾದ್ಯಂತ ಹಾಗೂ ಕರ್ನಾಟಕದಲ್ಲಿ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ನರೇಂದ್ರ ಮೋದಿ ಅವರು 2001ರಲ್ಲಿ ಗುಜರಾತ್ ಮುಖ್ಯಮಂತ್ರಿಯಾಗಿ ಸಾರ್ವಜನಿಕ ಜೀವನ ಆರಂಭಿಸಿ, 2014ರಲ್ಲಿ ದೇಶದ ಪ್ರಧಾನಮಂತ್ರಿಯಾದರು. ಸತತ ಮೂರನೇ ಬಾರಿಗೆ ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸುತ್ತಿರುವ ಅವರ 25 ವರ್ಷಗಳ ಸಾರ್ವಜನಿಕ ಜೀವನವನ್ನು ಸೇವಾ ಸಂಕಲ್ಪದೊಂದಿಗೆ ಆಚರಿಸಲಾಗುತ್ತಿದೆ ಎಂದರು.

ಈ ವೇಳೆ ಮಾಜಿ ಶಾಸಕ ರಮೇಶ ಭೂಸನೂರ ಮಾತನಾಡಿ, ಸಂಸದ ರಮೇಶ ಜಿಗಜಿಣಗಿ ಅವರ ಅಭಿವೃದ್ಧಿ ಕಾರ್ಯಗಳನ್ನು ಪ್ರಶ್ನಿಸುವ ಸಿಂದಗಿ ಶಾಸಕ ಅಶೋಕ ಮನಗೂಳಿ ಅವರಿಗೆ ಜಿಗಜಿಣಗಿ ಅವರ ರಾಜಕೀಯ ಸೇವೆಯ ಅನುಭವದಷ್ಟು ವಯಸ್ಸಾಗಿಲ್ಲ. ಜಿಗಜಿಣಗಿ ಅವರು ಮಾಡಿದ ಅಭಿವೃದ್ಧಿ ಕಾರ್ಯಗಳ ಮುಂದೆ ಶಾಸಕರ ಅನುಭವ ಕಡಿಮೆ ಎಂದು ಮಾಜಿ ಶಾಸಕ ರಮೇಶ ಭೂಸನೂರ ವ್ಯಂಗ್ಯವಾಡಿದರು.

ಶಾಸಕರ ಮನೆಯಲ್ಲಿಯೇ 3–4 ಜನ ಗುತ್ತಿಗೆದಾರರಿದ್ದು, ಬಹುತೇಕ ಕಾಮಗಾರಿಗಳನ್ನು ಅವರೇ ನಿರ್ವಹಿಸುತ್ತಿದ್ದಾರೆ. ನಗರದಲ್ಲಿ ನಡೆಯುತ್ತಿರುವ ಹಲವು ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿವೆ ಎಂದು ಆರೋಪಿಸಿದರು.

ಸಿಂದಗಿ ನಗರದ ಪ್ರಮುಖ ರಸ್ತೆಗಳು ತಗ್ಗು–ಗುಂಡಿಗಳಿಂದ ಹದಗೆಟ್ಟಿವೆ. ಶಾಸಕ ಅಶೋಕ ಮನಗೂಳಿ ಅವರ ನಾಲ್ಕು ವರ್ಷಗಳ ಅಧಿಕಾರಾವಧಿಯಲ್ಲಿ 20ಕಿ.ಮೀ. ಡಾಂಬರ ರಸ್ತೆ ನಿರ್ಮಿಸಿರುವುದನ್ನು ತೋರಿಸಿದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದು ಸವಾಲು ಹಾಕಿದರು.

ಆಲಮೇಲ ತಾಲೂಕು ರಚನೆಯಾಗಿರುವ ಹಿನ್ನೆಲೆಯಲ್ಲಿ ಅಲ್ಲಿಗೆ ಪ್ರತ್ಯೇಕ ಬಿಜೆಪಿ ಮಂಡಲ ನೀಡಬೇಕು ಎಂದು ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರಿಗೆ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಸಂಸದ ರಮೇಶ ಜಿಗಜಿಣಗಿ, ಮಾಜಿ ಶಾಸಕ ಹಾಗೂ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮಗೌಡ ಮಾತನಾಡಿ, ಕಾಂಗ್ರೆಸ್ ಸರ್ಕಾರದ ಕಾರ್ಯವೈಖರಿ ತೃಪ್ತಿಕರವಾಗಿಲ್ಲ. ಮುಂಬರುವ ತಾಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳಿಗೆ ಕಾರ್ಯಕರ್ತರು ಸಜ್ಜಾಗಬೇಕು. ಪಕ್ಷದ ಕಾರ್ಯಕರ್ತರೊಂದಿಗೆ ನಾವು ಸದಾ ಇರುತ್ತೇವೆ. ರಾಜ್ಯದಲ್ಲಿ ಮುಂದಿನ 2028ರಲ್ಲಿ ಬಿಜೆಪಿ ಅಧಿಕಾರಕ್ಕೆ ಬರಬೇಕು. ಬಿ.ವೈ.ವಿಜಯೇಂದ್ರ ಅವರು ಮುಖ್ಯಮಂತ್ರಿಯಾಗಬೇಕು ಎಂಬ ಆಶಯವನ್ನೂ ವ್ಯಕ್ತಪಡಿಸಿದರು.

ಈ ವೇಳೆ ಸಂತೋಷ ಪಾಟೀಲ ಡಂಬಳ ಪ್ರಾಸ್ತಾವಿಕ ಮಾತನಾಡಿದರು. ಗುರು ತಳವಾರ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ, ಅರುಣ ಶಹಾಪುರ, ಸೋಮನಗೌಡ ಪಾಟೀಲ ಸಾಸನೂರ, ಬಿಜೆಪಿ ಜಿಲ್ಲಾಧ್ಯಕ್ಷ ಗುರಲಿಂಗಪ್ಪ ಅಂಗಡಿ, ವಿಜುಗೌಡ ಪಾಟೀಲ, ಶ್ರೀಶೈಲಗೌಡ ಬಿರಾದಾರ ಮಾಗಣಗೇರಿ, ಬಸವರಾಜ ಯಂಕಂಚಿ, ಉಮೇಶ ಕಾರಜೋಳ, ಪೀರೂ ಕೆರೂರ, ಚಂದ್ರಶೇಖರ ಕವಟಗಿ, ಸುರೇಶ ಬಿರಾದಾರ, ಈರಣ್ಣ ರಾವೂರ, ಶಂಭುಲಿಂಗ ಕಕ್ಕಳಮೇಲಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

" ಸಿಂದಗಿಯಲ್ಲಿ ನಡೆಯುತ್ತಿರುವ 371ಜೆ ಸತ್ಯಾಗ್ರಹದ ವಿಚಾರವನ್ನು ರಾಜ್ಯ ಸರ್ಕಾರದ ಗಮನಕ್ಕೆ ತರುತ್ತೇನೆ. ಈ ವಿಚಾರವಾಗಿ ಎಲ್ಲ ರಾಜಕೀಯ ಪಕ್ಷಗಳ ನಾಯಕರು ಒಗ್ಗೂಡಿ ಚರ್ಚೆ ನಡೆಸಬೇಕು. ಬಳಿಕ ರಾಜ್ಯ ಸರ್ಕಾರದ ವತಿಯಿಂದ ಕೇಂದ್ರ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಲು ಕ್ರಮಕೈಗೊಳ್ಳಬೇಕು."



■ ಬಿ.ವೈ.ವಿಜಯೇಂದ್ರ
ಬಿಜೆಪಿ ರಾಜ್ಯಾಧ್ಯಕ್ಷರು

## 371(ಜೆ) ಹೋರಾಟಕ್ಕೆ ವಿಜಯೇಂದ್ರ ಬೆಂಬಲ



ಸಿಂದಗಿ: ನಗರದ ಬಸವೇಶ್ವರ ವೃತ್ತದ ಬಳಿ ಗೋಕಾಕ ಚಳವಳಿಯ ರೂವಾರಿ ಶ್ರೀ ರೇ.ಚ.ರೇವಡಿಗಾರ ಪ್ರತಿಷ್ಠಾನ ಹಾಗೂ 371(ಜೆ) ಹೋರಾಟ ಸಮಿತಿಯ ನೇತೃತ್ವದಲ್ಲಿ ಏಳು ದಿನಗಳಿಂದ ನಡೆಯುತ್ತಿರುವ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭೇಟಿ ನೀಡಿ, ಹೋರಾಟಕ್ಕೆ ಬೆಂಬಲ ಸೂಚಿಸಿ ಮನವಿ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಹೋರಾಟ ಸಮಿತಿಯ ಪ್ರಮುಖ ರಂಗನಾಥ ತೋರ್ಫೆ ಮಾತನಾಡಿ, ಡಾ. ಡಿ. ಎಂ.ನಂಜುಂಡಪ್ಪ ವರದಿಯ ಪ್ರಕಾರ ವಿಜಯಪುರ ಜಿಲ್ಲೆ ಹಿಂದುಳಿದ ಪ್ರದೇಶವಾಗಿದ್ದು, ಜಿಲ್ಲೆಯನ್ನು ಸಂವಿಧಾನದ 371(ಜೆ) ವಿಶೇಷ ಸೌಲಭ್ಯದ ವ್ಯಾಪ್ತಿಗೆ ಸೇರಿಸಬೇಕೆಂದು ಆಗ್ರಹಿಸಿದರು. 201213ರಲ್ಲಿ ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ 371(ಜೆ) ಕಲಂ ಜಾರಿಗೆ ಬಂದಿದ್ದರೂ ವಿಜಯಪುರ ಜಿಲ್ಲೆಯನ್ನು ಅದರಿಂದ ಹೊರಗಿಡಲಾಗಿದೆ. ಹೀಗಾಗಿ ಜಿಲ್ಲೆಯನ್ನು ಪುನಃ ಸೇರ್ಪಡೆಗೊಳಿಸಲು ರಾಜ್ಯ ಸರ್ಕಾರದ ಮೂಲಕ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ವಿಧಾನಮಂಡಲದಲ್ಲಿ ಚರ್ಚಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಮನವಿ ಸ್ವೀಕರಿಸಿದ ಬಿ.ವೈ.ವಿಜಯೇಂದ್ರ ಮಾತನಾಡಿ, ಡಾ.ನಂಜುಂಡಪ್ಪ ವರದಿಯ ಪ್ರಕಾರ ವಿಜಯಪುರ ಜಿಲ್ಲೆಗೂ 371(ಜೆ) ಸೌಲಭ್ಯ ದೊರೆಯಬೇಕಿತ್ತು ಎಂಬುದು ಹೋರಾಟಗಾರರ ಪ್ರಮುಖ ಬೇಡಿಕೆಯಾಗಿದೆ. ಈ ವಿಷಯವನ್ನು ರಾಜ್ಯ ಸರ್ಕಾರದ ಗಮನಕ್ಕೆ ತಂದು, ವಿಜಯಪುರ ಜಿಲ್ಲೆಯನ್ನು 371(ಜೆ) ವ್ಯಾಪ್ತಿಗೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಒತ್ತಾಯಿಸಲಾಗುವುದು. ಕೇಂದ್ರ ಸರ್ಕಾರದ ಮಟ್ಟದಲ್ಲಿಯೂ ಈ ಕುರಿತು ಚರ್ಚಿಸಿ ನ್ಯಾಯ ದೊರಕಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ರಮೇಶ ಭೂಸನೂರ, ಸಮಿತಿ ಸದಸ್ಯರಾದ ಸಿದ್ದರಾಮ ಪಾಟೀಲ, ಪಂಡಿತ ಯಂಪೂರೆ, ಎಂ.ಎಂ.ಹಂಗರಗಿ, ಎಸ್.ಎಸ್.ಮಲ್ಲೇದ, ದಾನಪ್ಪಗೌಡ ಚನಗೊಂಡ, ಸಿದ್ದು ಕಡಗಂಚಿ, ಅರವಿಂದ ಕುಲಕರ್ಣಿ, ಗುರುರಾಜ ಪಡಶೆಟ್ಟಿ, ಅಂಬರೀಶ ಸುಣಗಾರ, ಆನಂದ ಶಾಬಾದಿ, ಮಲ್ಲಿಕಾರ್ಜುನ ಅಲ್ಲಾಪುರ, ಪೀರು ಕೇರೂರ, ಮಂಡಲ ಅಧ್ಯಕ್ಷ ಸಂತೋಷ ಪಾಟೀಲ ಡಂಬಳ, ಸಿದ್ದು ಬುಳ್ಳಾ, ಅಶೋಕ ಅಲ್ಲಾಪುರ, ಪ್ರಶಾಂತ ಕದ್ದರಕಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ವಿಜಯಪುರದಲ್ಲಿ ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ ಆಗ್ರಹಿಸಿ ಮನವಿ

# ಖಾಸಗಿ ಪ್ರತಿಷ್ಠಿತ ಶಾಲೆಗಳಲ್ಲಿ ಆರ್ಟಿಇ ಪ್ರವೇಶ ಮರುಪ್ರಾರಂಭಿಸಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಆರ್ಥಿಕವಾಗಿ ದುರ್ಬಲ ಹಾಗೂ ಸಾಮಾಜಿಕವಾಗಿ ಹಿಂದುಳಿದ ವರ್ಗಗಳ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಪಡೆಯಲು ಸಮಾನ ಅವಕಾಶ ಕಲ್ಪಿಸುವ ಉದ್ದೇಶದಿಂದ, ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ಶಿಕ್ಷಣದ ಹಕ್ಕು (ಖಖಇ) ಕಾಯ್ದೆಯಡಿ ಅರ್ಹ ಮಕ್ಕಳಿಗೆ ಪ್ರವೇಶ ಕಲ್ಪಿಸುವ ವ್ಯವಸ್ಥೆಯನ್ನು ಮರುಪ್ರಾರಂಭಿಸಬೇಕೆಂದು ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ.), ಬೆಂಗಳೂರು ವಿಜಯಪುರ ಜಿಲ್ಲಾ ಘಟಕದ ಪದಾಧಿಕಾರಿಗಳು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಈ ಕುರಿತು ಸಮಿತಿಯ ರಾಜ್ಯ ಹಾಗೂ ಜಿಲ್ಲಾ ಘಟಕಗಳ ಪದಾಧಿಕಾರಿಗಳು ವಿಜಯಪುರ ಜಿಲ್ಲಾಧಿಕಾರಿಗಳ ಮೂಲಕ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ, ಆರ್ಟಿಇ ಪ್ರವೇಶ ವ್ಯವಸ್ಥೆಯಲ್ಲಿನ ಬದಲಾವಣೆಗಳನ್ನು ಮರುಪರಿಶೀಲಿಸಿ, ಅರ್ಹ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಕರ್ನಾಟಕದಲ್ಲಿ RTE ಕಾಯ್ದೆಯಡಿ ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ಅರ್ಹ ಮಕ್ಕಳಿಗೆ ಪ್ರವೇಶ ಪಡೆಯಲು ಅವಕಾಶವಿತ್ತು. ಆದರೆ 2018ರ ಡಿಸೆಂಬರ್‌ನಲ್ಲಿ ನಡೆದ ಸಚಿವ ಸಂಪುಟದ ನಿರ್ಧಾರ ಹಾಗೂ 30–01–2019ರಂದು ಖಖಇ ನಿಯಮಗಳ ಖಣಟಜ 4ಕ್ಕೆ ಮಾಡಲಾದ ತಿದ್ದುಪಡಿಯ ನಂತರ, ನೆರೆಹೊರೆಯಲ್ಲಿ ಸರ್ಕಾರಿ ಅಥವಾ ಅನುದಾನಿತ ಶಾಲೆಗಳು ಲಭ್ಯವಿರುವ ಪ್ರದೇಶಗಳಲ್ಲಿ ಖಾಸಗಿ ಅನುದಾನರಹಿತ ಶಾಲೆಗಳ ಖಖಇ ಪ್ರವೇಶಕ್ಕೆ ನಿರ್ಬಂಧಗಳು ಉಂಟಾದವು. ಇದರಿಂದ ಆರ್ಥಿಕವಾಗಿ ದುರ್ಬಲ ಕುಟುಂಬಗಳ ಮಕ್ಕಳಿಗೆ ಖಾಸಗಿ ಶಾಲೆಗಳಲ್ಲಿ ಶಿಕ್ಷಣ ಪಡೆಯುವ ಅವಕಾಶ ಸೀಮಿತವಾಗಿದೆ ಎಂಬುದು ಸಮಿತಿಯ ಅಭಿಪ್ರಾಯವಾಗಿದೆ.

ಸರ್ಕಾರಿ ಶಾಲೆಗಳ ಬಲವರ್ಧನೆಗೆ ಆದ್ಯತೆ ನೀಡುವುದರ ಜೊತೆಗೆ, ಬಡ ಮತ್ತು ಹಿಂದುಳಿದ ಕುಟುಂಬಗಳ ಮಕ್ಕಳಿಗೂ ಉತ್ತಮ ಗುಣಮಟ್ಟದ ಶಿಕ್ಷಣ ಪಡೆಯಲು ಹೆಚ್ಚಿನ ಅವಕಾಶಗಳನ್ನು ಕಲ್ಪಿಸಬೇಕು. ಮಕ್ಕಳ ಶಿಕ್ಷಣದ ಹಕ್ಕು ಹಾಗೂ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಪದಾಧಿಕಾರಿಗಳು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಭೀಮ್ ರಾಜ್ಯ ದಲಿತ್ ಸೇವಾ ಸಮಿತಿಯ ರಾಜ್ಯಾಧ್ಯಕ್ಷ ಅಪ್ಪುರಾಜ್ ನಿಮಾದಾರ, ರಾಜ್ಯ ಉಪಾಧ್ಯಕ್ಷ ವಿಜಯಕುಮಾರ ನಿಮಾದಾರ, ರಾಜ್ಯ ಪ್ರಧಾನ ಕಾರ್ಯದರ್ಶಿ ಸೋಮಶೇಖರ ಕಬಾಡೆ, ವಿಜಯಪುರ ಜಿಲ್ಲಾ ಅಧ್ಯಕ್ಷ ನಾಗರಾಜ ಕಬಾಡೆ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಕಾಸೆ ಸೇರಿದಂತೆ ಹಲವರು ಭಾಗವಹಿಸಿದ್ದರು.



## ವಿಜಯಪುರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಸಮಾಧಾನ

# ತೆಲಂಗಾಣಕ್ಕೆ ನೀರು ಹರಿಸಲು ಆದೇಶ ಅಕ್ಷಮ್ಯ ಅಪರಾಧ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮ ಸ್ನೇಹಿತರನ್ನು ಖುಷಿ ಪಡಿಸಲು ನಾರಾಯಣಪೂರ ಜಲಾಶಯದಿಂದ ಪರೋಕ್ಷವಾಗಿ ನೀರು ಹರಿಸಲು ಮೌಖಿಕವಾಗಿ ಆದೇಶ ಹೊರಡಿಸಿರುವುದು

ಅಕ್ಷಮ್ಯ ಅಪರಾಧ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಸಮಾಧಾನ ಹೊರಹಾಕಿದರು.

ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತೆಲಂಗಾಣ ಮುಖ್ಯಮಂತ್ರಿಗಳು ನಮ್ಮ ಮುಖ್ಯಮಂತ್ರಿಗಳ ಆಪ್ತ ಸ್ನೇಹಿತರು, ಬಿಸಿನೆಸ್ ಇಂಟ್ರಸ್ಟ್ ಸಹ ನಮ್ಮ ಮುಖ್ಯಮಂತ್ರಿಗಳಿಗೆ ಇದೆ, ಹೀಗಾಗಿ ತಮ್ಮ ವೈಯುಕ್ತಿಕ ಸ್ವಾರ್ಥ ಸಾಧನೆಗಾಗಿ ಹಾಗೂ ಸ್ನೇಹಿತನನ್ನು ಖುಷಿಪಡಿಸಲು ನೀರು ಹರಿಸುವುದು ಅಕ್ಷಮ್ಯ ಅಪರಾಧ, ನಮ್ಮ ರೈತರಿಗೆ ನೀರಿಲ್ಲ, ಆದರೂ ಈ ರೀತಿ ನೀರು ಹರಿಸುವುದು ಬೇಜವಾಬ್ದಾರಿತನದ ಲಕ್ಷಣ ಎಂದರು.

ಈ ಹಿಂದೆ ರಾಹುಲ್ ಗಾಂಧಿ ಖುಷಿಪಡಿಸಲು ಕೇರಳಕ್ಕೆ ನೆರವು ನೀಡಲಾಯಿತು, ಈಗ ನಮ್ಮ ರಾಜ್ಯದ ರೈತರಿಗೆ ನೀರಿಲ್ಲ, ಆದರೆ ತಮ್ಮ ಸ್ನೇಹಿತರಿಗೆ ಖುಷಿ ಪಡಿಸಲು ನಮ್ಮ ನೀರನ್ನು ಹರಿಸಲಾಗುತ್ತಿದೆ ಎಂದರು. ಮಹಾ ಮಾದರಿಯಲ್ಲಿ ರೈತರ ಸಾಲಮನ್ನಾ ಮಾಡಿ

ಭೀಕರ ಬರದ ವೇಳೆ ರಾಜ್ಯ ಸರ್ಕಾರದ ಅಭಯವಿಲ್ಲದ ಕಾರಣ ಅನ್ನದಾತ ಆತ್ಮಸ್ಥೈರ್ಯ ಕಳೆದುಕೊಂಡು ರೈತ ಆತ್ಮಹತ್ಯೆ ದಾರಿ ತುಳಿಯುವಂತಾಗಿದೆ, ಒಂದು ರೈತ ಕುಟುಂಬಕ್ಕೆ ಕೇವಲ 2500 ರೂ. ಭೀಕ್ಷೆ ನೀಡಿದ ರೀತಿಯಲ್ಲಿ ನೀಡುವ ನಿರ್ಧಾರ ಕೈಗೊಂಡಿರುವುದು ನಾಚಿಕೆಗೇಡು, ವಿಶೇಷ ಅಧಿವೇಶನದಲ್ಲಿ ಸಾಲಮನ್ನಾಗೆ ನಾವು ಗೋಗೆರೆದರೂ ಸಹ ಕೇಳಲಿಲ್ಲ ಎಂದು ಅಸಮಾಧಾನ ಹೊರಹಾಕಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕೂಡಲೇ ಮಹಾರಾಷ್ಟ್ರ ಮಾದರಿಯಲ್ಲಿ ರೈತರ ಸಾಲಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.ಮಹಾರಾಷ್ಟ್ರ ಸರ್ಕಾರ ಈಗಾಗಲೇ 2 ಲಕ್ಷ ರೂ. ಸಾಲಮನ್ನಾ ಮಾಡಿ ದಿಟ್ಟ ನಿರ್ಧಾರ ಕೈಗೊಂಡಿದ್ದಾರೆ, ಆದರೆ ನಮ್ಮ ಮುಖ್ಯಮಂತ್ರಿಗಳಿಗೆ ರಿಯಲ್ ಎಸ್ಟೇಟ್ ಪ್ರಾಜೆಕ್ಟ್, ಟೌನಶಿಫ್ ಬಗ್ಗೆ ಆಸಕ್ತಿ ಇದೆ ಹೊರತು ರೈತರ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲ ಎಂದು ಟೀಕಾ ಪ್ರಹಾರ ನಡೆಸಿದರು.

ಬಲವಂತದ ಸಾಲ ವಸೂಲಾತಿ ಮಾಡಬೇಡಿ ಎಂದು ಹೇಳಿದರೂ ಸಹ ಅನೇಕ ಬ್ಯಾಂಕುಗಳು ಸಾಲ ಪಾವತಿಗೆ ರೈತರಿಗೆ ನೋಟಿಸ್ ನೀಡಿವೆ, ಆ ಮೂಲಕ ರಾಜ್ಯದ ಮುಖ್ಯಮಂತ್ರಿಗಳ ಮಾತಿಗೆ ಕವಡೆ ಕಾಸಿನ ಬೆಲೆ ಇಲ್ಲ ಎಂದರು. ಸರ್ಕಾರ ಇನ್ನಾದರೂ ಎಚ್ಚೆತ್ತುಕೊಂಡು ಐದು ಲಕ್ಷ ರೂ. ಗಳವರೆಗೆ ರೈತರ ಕೃಷಿ ಸಾಲ ಮನ್ನಾ, ಪ್ರತಿ ಹೆಕ್ಟೇರ್ ಗೆ ರಾಜ್ಯ ಸರ್ಕಾರ 50 ಸಾವಿರ ರೂ. ಪರಿಹಾರ ನೀಡಬೇಕು ಎಂದರು. ಒಂದೂವರೆ ಲಕ್ಷ ಖಾಲಿ ಹುದ್ದೆ ಭರ್ತಿ ಮಾಡುವುದಾಗಿ ಹೇಳಿದ ರಾಜ್ಯ ಸರ್ಕಾರ ಒಂದೂವರೆ ಸಾವಿರ ಉದ್ಯೋಗಳನ್ನು ಭರ್ತಿ ಮಾಡದೇ ಯುವಜನತೆ ಬದುಕಿನೊಂದಿಗೆ ಚೆಲ್ಲಾಟವಾಡುವ ಮೂಲಕ ಯುವಕರನ್ನು ಧಂಗೆ ಏಳುವ ಪರಿಸ್ಥಿತಿ ಸೃಜಿಸಿದೆ ಎಂದು ಆತಂಕ ವ್ಯಕ್ತಪಡಿಸಿದರು. ಸಂಸದ ರಮೇಶ ಜಿಗಜಿಣಗಿ, ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಮಾಜಿ ಶಾಸಕರಾದ ಎ.ಎಸ್. ಪಾಟೀಲ ನಡಹಳ್ಳಿ, ಸೋಮನಗೌಡ ಪಾಟೀಲ ಸಾಸನೂರ, ರಮೇಶ ಭೂಸನೂರ, ವಿಜುಗೌಡ ಪಾಟೀಲ, ಅರುಣ ಶಹಾಪೂರ, ಪರಶುರಾಮಸಿಂಗ್ ರಜಪೂತ, ರಮೇಶ ಬಿದನೂರ, ಸಂಜೀವ ಐಹೊಳಿ, ಕಾಸುಗೌಡ ಬಿರಾದಾರ, ಡಾ.ಸುರೇಶ ಬಿರಾದಾರ, ಶಂಕರಗೌಡ ಪಾಟೀಲ, ಸಾಬು ಮಾಶ್ಯಾಳ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ರಾಜ್ಯದಲ್ಲಿ ಆರ್ಥಿಕ ತುರ್ತು ಪರಿಸ್ಥಿತಿ

ಸಾರಿಗೆ ಇಲಾಖೆಯ ಬಸ್ ಗಳು ಡಿಪೋದಲ್ಲಿ ನಿಂತಿವೆ, ಡಿಸೈಲ್ ಹಣವನ್ನು ಆಯಾ ಆಯಿಲ್ ಕಂಪನಿಗಳಿಗೆ ಈ ಸರ್ಕಾರ ಹಣವನ್ನೇ ಪಾವತಿಸಿಲ್ಲ, ಹೀಗಾಗಿ ಬಸ್ ವ್ಯತ್ಯಯವಾಗುತ್ತಿವೆ, ಒಂದರ್ಥದಲ್ಲಿ ರಾಜ್ಯದ ಆರ್ಥಿಕ ಪರಿಸ್ಥಿತಿ ಅಧೋಗತಿಗೆ ತಲುಪಿದ್ದು, ಆರ್ಥಿಕ ತುರ್ತು ಪರಿಸ್ಥಿತಿಯನ್ನು ರಾಜ್ಯ ಎದುರಿಸುತ್ತಿದೆ, ಆದರೆ ಇದನ್ನು ಮರೆಮಾಚಲು ದಿಕ್ಕು ತಪ್ಪಿಸುವ ಕಾರ್ಯ ಕಾಂಗ್ರೆಸ್ ಮಾಡುತ್ತಿದೆ ಎಂದು ವಿಜಯೇಂದ್ರ ವಾಗ್ದಾಳಿ ನಡೆಸಿದರು.

9 ಲಕ್ಷ ರೂ. ಸಾಲದ ಹೊರೆಯಿಂದಾಗಿ ಅದನ್ನು ಸರಿದೂಗಿಸಲು ಅಬಕಾರಿಗೆ ಇಲಾಖೆಗೆ ಟಾರ್ಗೆಟ್ ನೀಡಲಾಗಿದೆ, ಮಾದಕ ದ್ರವ್ಯ ಅವ್ಯಾಹತವಾಗಿದ್ದು ನಮ್ಮ ರಾಜ್ಯ ಉಡ್ತಾ ಪಂಜಾಬ್ ಆಗಿದೆ ಎಂದರು.



## ಎಸ್ಐಆರ್ ಬಗ್ಗೆ ಆಕ್ಷೇಪಿಸಿದ ಕಾರ್ಪೋರೇಟರ್‌ಗಳು ನಾಲಾಯಕರು

ವಿಜಯಪುರ: ಎಸ್.ಐ.ಆರ್ ಪ್ರಕ್ರಿಯೆ ಸಮರ್ಪಕವಾಗಿ ನಡೆದಿದೆ, ಅದು ಸರ್ಮರ್ಪರ್ಕವಾಗಿ ನಡೆದಿಲ್ಲ ಎಂದು ಹೇಳಿರುವ ಕಾರ್ಪೋರೆಟ್ ಗಳು ನಾಲಾಯಕರು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಖಾರವಾಗಿ ಪ್ರತಿಕ್ರಿಯೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ನಿಮ್ಮ ಪಾಲಿಕೆ ಸದಸ್ಯರೇ ಎಸ್.ಐ.ಆರ್. ಬಗ್ಗೆ ದೂರಿದ್ದಾರೆ ಎಂಬ ಪ್ರಶ್ನೆಗೆ ಈ ರೀತಿ ಪ್ರತಿಕ್ರಿಯೆ ನೀಡಿದ ಅವರು, ಅವರು ಯಾರು ಹೇಳಿದ್ದಾರೋ ಅವರು ನಾಲಾಯಕರು, ಅವರಿಗೆ ಮಾಹಿತಿ ಇದ್ದಂತಿಲ್ಲ, ಅವರು ಯಾರು ಹೇಳಿದ್ದಾರೆ ಎಂಬುದರ ಕುರಿತು ವರದಿ ತರಿಸಿಕೊಳ್ಳುವೆ ಎಂದರು.

ಭಾರತೀಯ ಜನತಾ ಪಕ್ಷದಲ್ಲಿ ಅಸಮಾಧಾನ ಇಲ್ಲ ಎಂದು ಹೇಳುವುದಿಲ್ಲ, ಕೆಲವೊಂದು ಸಣ್ಣ ಪುಟ್ಟ ಭಿನ್ನಾಭಿಪ್ರಾಯಗಳಿರುವುದು ಸತ್ಯ, ಈ ಕಾರಣಕ್ಕಾಗಿ ಅದರ ಬಗ್ಗೆ ಸೂಕ್ತ ರೀತಿಯಲ್ಲಿ ಚರ್ಚೆ ನಡೆಸುವೆ, ಅದಕ್ಕೆ ಪರಿಹಾರ ಕಂಡುಕೊಳ್ಳಲಾಗುವುದು ಎಂದರು.

## ಅಂಡರಪಾಸ್ ಸ್ವಚ್ಛಗೊಳಿಸಿ ಸಾರ್ವಜನಿಕ ಸಂಚಾರಕ್ಕೆ ಮುಕ್ತಗೊಳಿಸಿ



ಕಲಬುರಗ; ನಗರದ ಜೇವರ್ಗಿ ಕಾಲೋನಿ, ದತ್ತ ನಗರ ಬಳಿಯ ರೈಲ್ವೆ ಕಿ.ಮೀ. 566/1 ಮತ್ತು 566/2 ರ ಅಂಡರ್-ಪಾಸ್ ಸ್ವಚ್ಛಗೊಳಿಸಿ ಸಾರ್ವಜನಿಕ ಸಂಚಾರಕ್ಕೆ ಮುಕ್ತಗೊಳಿಸಬೇಕು ಎಂದು ಜೇವರ್ಗಿ ಕಾಲೋನಿ, ದತ್ತ ನಗರ, ಬಿದ್ದಾಪುರ ಕಾಲೋನಿ ಮತ್ತು ಸಿಐವಿ ಕಾಲೋನಿ ನಿವಾಸಿಗಳು ಮನವಿ ಮಾಡಿದ್ದಾರೆ. ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು ಮತ್ತು ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಮಾಡಿರುವ ಅವರು, ರೈಲ್ವೆ ಇಲಾಖೆಯು ಹೊಸ ಜೇವರ್ಗಿ ರಸ್ತೆಯಲ್ಲಿ ಮೇಲ್ಸೇತುವೆ ನಿರ್ಮಾಣದ ಜೊತೆಗೆ 566/1 ಮತ್ತು 566/2 ರಲ್ಲಿ ಎರಡು ಅಂಡರ್-ಪಾಸ್ ಗಳನ್ನು ನಿರ್ಮಿಸಿದೆ. ಆದರೆ ಇಂದಿಗೂ ಅದು ಬಳಕೆಗೆ ಬಂದಿಲ್ಲ ಎಂದು ತಿಳಿಸಿದ್ದಾರೆ.

ಮಹಾನಗರ ಪಾಲಿಕೆಯ ಎರಡು ಚರಂಡಿಗಳನ್ನು ಈ ಬ್ರಿಡ್ಜ್ ಕೆಳಗೆ ಬಿಡಲಾಗಿದೆ. ಇದ-ರಿಂದ ಕೊಳಚೆ ನೀರು ಶಾಶ್ವತವಾಗಿ ನಿಂತಿದೆ. ಈ ಕಲುಷಿತ ನೀರು ಇಂಗಿ ಬಡಾವಣೆಯ ಸಾರ್ವಜನಿಕ ಕುಡಿಯುವ ಬೋರವೆಲ್ ನೀರು ಸಂಪೂರ್ಣ ಕಲುಷಿತಗೊಂಡಿದೆ. ಜನರ ಆರೋಗ್ಯಕ್ಕೆ ದೊಡ್ಡ ಅಪಾಯ ಎದುರಾಗಿದೆ. ಈ ಬ್ರಿಡ್ಜ್ ಪ್ರಾರಂಭವಾದರೆ ಕೇಂದ್ರ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಸೂಪರ್ ಮಾರ್ಕೆಟ್ ಕೇವಲ 1 ಕಿ.ಮೀ. ಅಂತರದಲ್ಲಿ ಬರುತ್ತದೆ. ಇಲ್ಲದಿದ್ದರೆ ನಾವು 4 ಕಿ.ಮೀ. ಸುತ್ತು ಹಾಕಿ ಹೊಸ ಜೇವರ್ಗಿ ರಸ್ತೆ ಮೇಲ್ವೇತುವೆ ಮೂಲಕ ಹೋಗಬೇಕಾಗಿದೆ. ಈ ಅಂಡರ್-ಪಾಸ್ ತೆರೆದರೆ ಸಾವಿರಾರು ವಿದ್ಯಾರ್ಥಿಗಳು, ನೌಕರರು ಮತ್ತು ನಾಗರಿಕರಿಗೆ ಪ್ರತಿದಿನ ಪೆಟ್ರೋಲ್ ಮತ್ತು ಸಮಯ ಉಳಿತಾಯವಾಗುತ್ತದೆ. ಹೊಸ ಜೇವರ್ಗಿ ರಸ್ತೆ ಮೇಲ್ಸೆತುವೆ ಮೇಲಿನ ವಾಹನ ದಟ್ಟಣೆ ಕಡಿಮೆಯಾಗುತ್ತದೆ. ಆದ್ದರಿಂದ ಪಾಲಿಕೆಯ ಚರಂಡಿ ನೀರನ್ನು ಬ್ರಿಡ್ಜ್ ಕೆಳಗಿನಿಂದ ಬೇರೆಡೆಗೆ ತಿರುಗಿಸಲು ಆದೇಶಿಸಬೇಕು. ರಸ್ತೆನಲ್ಲಿ ನಿಂತಿರುವ ನೀರನ್ನು ತೆರವುಗೊಳಿಸಿ, ನೆಲವನ್ನು ಸಮತಟ್ಟು ಮಾಡಿ, ಮಳೆ ನೀರು ಹರಿದು ಹೋಗಲು ವ್ಯವಸ್ಥೆ ಮಾಡಬೇಕು, ಸಾರ್ವಜನಿಕರು, ದ್ವಿಚಕ್ರ ವಾಹನಗಳು ಮತ್ತು ಆಟೋಗಳು ಓಡಾಡಲು ಅನುವು ಮಾಡಿಕೊಡಬೇಕು ಇದರಿಂದ ಸುಮಾರು 20,000 ನಿವಾಸಿಗಳಿಗೆ ಅನುಕೂಲವಾಗಲಿದೆ ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

## ಖಾಜಾ ಬಂದಾನವಾಜ್ ದರ್ಗಾಕ್ಕೆ ಭೇಟಿ ನೀಡಿದ ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರಿಸ್



ಕಲಬುರಗಿ: ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ಅಧ್ಯಕ್ಷ ಹಾಗೂ ಶಾಂತಿನಗರದ ಶಾಸಕರಾದ ಎನ್.ಎ. ಹ್ಯಾರಿಸ್ ಅವರು, ಬುಧವಾರ ಗುಲ್ಬರ್ಗಾದ ಬಡಿ ದೇವಡಿಗೆ ಭೇಟಿ ನೀಡಿದ ಅವರು, ದರಗಾ ಹಜರತ್ ಖಾಜಾ ಬಂದನವಾಜ್ (ರಹ.) ಅವರ ಸಜ್ಜಾದಾ ನಶೀನ್ ಹಜರತ್ ಡಾ. ಹಾಫಿಜ್ ಸಯ್ಯಿದ್ ಮುಹಮ್ಮದ್ ಅಲಿ ಅಲ್-ಹುಸೈನಿ ಸಾಹೇಬ್ ಅವರನ್ನು ಭೇಟಿಯಾಗಿ ಅವರ ಸಮ್ಮುಖದಲ್ಲಿ ಹಜರತ್ ಖಾಜಾ ಬಂದಾನವಾಜ್ ದರ್ಗಾಕ್ಕೆ ತೆರಳಿ ಪ್ರಾರ್ಥನೆ ಸಲ್ಲಿಸಿದರು.

ಗುಂಬದ್-ಎ-ಮುಬಾರಕ್‌ನಲ್ಲಿ ಗುಲ್-ಎ-ಅಕೀದತ್ ಸಮರ್ಪಿಸಿ ದುವಾ ಸಲ್ಲಿಸಿದರು. ಸಜ್ಜಾದಾ ನಶೀನ್ ಅವರಿಗೆ ತಬರ್ರುಕಾತ್ ನೀಡಿದರು. ಡಾ. ಸಯ್ಯಿದ್ ಮುಸ್ತಫಾ ಅಲ್-ಹುಸೈನಿ ಸಾಹೇಬ್ ಶ್ರೀಮತಿ ಬಿಲ್ಕೀಸ್ ಬಾನು, ಒಐಅ ಅವರಿಗೂ ತಬರ್ರುಕಾತ್ ನೀಡಲಾಯಿತು.

ನಂತರ ಹಜರತ್ ಸಜ್ಜಾದಾ ನಶೀನ್ ಅವರು ಎನ್.ಎ. ಹ್ಯಾರಿಸ್ ಅವರಿಗೆ ದರ್ಗಾ ವಿವಿಧ ಸ್ಥಳಗಳನ್ನು ತೋರಿಸಿ, ದರ್ಗಾದ ಹಳೆಯ ವಾಸ್ತುಶಿಲ್ಪ, ಅದರ ಐತಿಹಾಸಿಕ ಮಹತ್ವ ಹಾಗೂ ವಿನ್ಯಾಸದ ಕುರಿತು ವಿವರವಾದ ಮಾಹಿತಿ ನೀಡಿದರು.

ಸಯ್ಯಿದ್ ಮುಹಮ್ಮದ್ ಗೇಸುದರಾಜ್ ಸಂಶೋಧನಾ ಅಕಾಡೆಮಿಗೆ ಭೇಟಿ ನೀಡಿದರು. ಇಲ್ಲಿ 1960ರಿಂದ 2026ರವರೆಗಿನ ಶಹಬಾಜ್ ಬುಕ್‌ನ ಸಂಪೂರ್ಣ ಸಂಗ್ರಹವನ್ನು ಉದ್ಘಾಟಿಸಲಾಯಿತು.

ಈ ಸಂಶೋಧನಾ ಸಂಗ್ರಹದಲ್ಲಿ ದರ್ಗಾ ಹಜರತ್ ಖಾಜಾ ಬಂದನವಾಜ್ (ರಹ.) ಅವರ ಉರ್ಸ್ ಮುಬಾರಕ್ ಸಂದರ್ಭದಲ್ಲಿ ಪ್ರತಿವರ್ಷ ನಡೆಯುವ ಸೆಮಿನಾರ್‌ಗಳಲ್ಲಿ ಮಂಡಿಸಲಾಗುವ ಸಂಶೋಧನಾ ಲೇಖನಗಳನ್ನು ಒಳಗೊಂಡಿರುತ್ತದೆ. ಈ ಲೇಖನಗಳನ್ನು ನಂತರ ಪುಸ್ತಕದ ರೂಪದಲ್ಲಿ ಪ್ರಕಟಿಸಲಾಗುತ್ತದೆ.

ಈ ಸಂದರ್ಭದಲ್ಲಿ ಸಯ್ಯಿದ್ ಮುರ್ತಜಾ ಹುಸೈನಿ ಸಾಹೇಬ್,ಸಯ್ಯಿದ್ ಅಕೀಬ್ ಹುಸೈನಿ ಸಾಹೇಬ್,ಸಯ್ಯಿದ್ ಹೈದರ್ ಪಾಷಾ ಸಾಹೇಬ್, ಮಾಜಿ ಸಚಿವ ರಹೀಮ್ ಖಾನ್, ಏಗಆಂ ಅಧ್ಯಕ್ಷ ಮಝರ್ ಆಲಂ ಖಾನ್, ಏಒಕ ಉಪಮೇಯರ್ ಖುಸ್ರೋ ಜಹಾಗಿರ್ದಾರ್, ಏಕಅಅ ಸದಸ್ಯ ಫರಾಝ್-ಉಲ್-ಇಸ್ಲಾಂ, ಇಲಿಯಾಸ್ ಸೇಠ್ ಬಾಗವಾನ್ ಸೇರಿದಂತೆ ಕಾಂಗ್ರೆಸ್ ಪಕ್ಷದ ಹಲವು ನಾಯಕರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

## ಕೊಲೆ ಪ್ರಕರಣ: ಪತ್ನಿ, ಪ್ರಿಯಕರ ಸೇರಿ ನಾಲ್ವರಿಗೆ ಜೀವಾವಧಿ ಶಿಕ್ಷೆ

ಕಲಬುರಗಿ: ವಿವಾಹೇತರ ಸಂಬಂಧಕ್ಕೆ ಅಡ್ಡಿಯಾಗಿದ್ದ ಪತಿಯನ್ನು ಕೊಂದ ಪ್ರಕರಣದಲ್ಲಿ ಪತ್ನಿ, ಪ್ರಿಯಕರ ಸೇರಿದಂತೆ ನಾಲ್ವರು ಅಪರಾಧಿಗಳಿಗೆ ಇಲ್ಲಿನ ಜಿಲ್ಲಾ ನ್ಯಾಯಾಲಯವು ಜೀವಾವಧಿ ಶಿಕ್ಷೆ ಹಾಗೂ ರೂ.2.39 ಲಕ್ಷ ದಂಡ ವಿಧಿಸಿ ಆದೇಶಿಸಿದೆ.

ಚಿಂಚೋಳಿ ತಾಲ್ಲೂಕಿನ ಕುಡ್ಡಳ್ಳಿ ಗ್ರಾಮದಲ್ಲಿ 2022ರ ಆಗಸ್ಟ್ 5ರಂದು ಕೊಲೆಯಾಗಿದ್ದ ರಾಮಣ್ಣ ಗೋಟೂರ ಅವರ ಪತ್ನಿ ಸುನೀತಾ ಗೋಟೂರ,ಪ್ರಿಯಕರ ಮಲ್ಲಪ್ಪ ಪೂಜಾರಿ, ಅವರಿಗೆ ನೆರವು ನೀಡಿದ್ದ ಸಾಬಣ್ಣ ಪೂಜಾರಿ ಹಾಗೂ ಬಸಪ್ಪ ಗೋಟೂರ ಶಿಕ್ಷೆಗೆ ಒಳಗಾದವರು.

ರಾಮಣ್ಣ ಹಾಗೂ ಮಲ್ಲಪ್ಪ ಪರಸ್ಪರ ಸ್ನೇಹಿತರು. ರಾಮಣ್ಣನ ಮನೆಗೆ ಹೋಗುತ್ತಿದ್ದ ಮಲ್ಲಪ್ಪ ಕ್ರಮೇಣ ರಾಮಣ್ಣನ ಪತ್ನಿ ಜೊತೆಗೆ ವಿವಾಹೇತರ ಸಂಬಂಧ ಹೊಂದಿದ್ದ. ಈ ವಿಷಯ ರಾಮಣ್ಣನಿಗೆ ತಿಳಿದಾಗ ರಾಜಿ ಪಂಚಾಯಿತಿಯೂ ನಡೆದಿತ್ತು. ಈ ನಡುವೆ ತಮ್ಮ ಸಂಬಂಧಕ್ಕೆ ಅಡ್ಡಿಯಾಗಿದ್ದ ರಾಮಣ್ಣನ ಕೊಲೆಗೆ ಮಲ್ಲಪ್ಪ ಹಾಗೂ ಸುನೀತಾ ನಿರ್ಧ-ರಿಸಿದ್ದರು. ಅದರಂತೆ ಒಂದು ದಿವಸ ತಡರಾತ್ರಿ ರಾಮಣ್ಣ ಮಲಗಿದ್ದಾಗ ಸುನೀತಾ ಅವರೇ ಎದ್ದು ಬಾಗಿಲು ತೆಗೆದು ಮಲ್ಲಪ್ಪ, ಸಾಬಣ್ಣ ಹಾಗೂ ಬಸಪ್ಪ ಅವರನ್ನು ಮನೆಯೊಳಗೆ ಬಿಟ್ಟುಕೊಂಡಿದ್ದರು. ಬಳಿಕ ಆ ಮೂವರು ಸೇರಿ ಕೊಲೆ ಮಾಡಿದ್ದರು.

ಈ ನಡುವೆ ರಾಮಣ್ಣನ ಮಕ್ಕಳು ಎಚ್ಚರಗೊಂಡಿದ್ದರು. ಅವರನ್ನು ತಾಯಿ ಸುನೀತಾ ಅವರೇ ಬೇರೊಂದು ಕೊಠಡಿಯಲ್ಲಿ ಕೂಡಿಹಾಕಿದ್ದರು. ಕೊಲೆ ಬಳಿಕ ಶವ ಸಾಗಿಸುವಾಗ ರಾಮಣ್ಣನ ಮಕ್ಕಳಲ್ಲಿ ಒಬ್ಬ ತಪ್ಪಿಸಿಕೊಂಡು ಅವರ ದೊಡ್ಡಪ್ಪನಿಗೆ ವಿಷಯ ಮುಟ್ಟಿಸಿದಾಗ ವಿಷಯ ಬೆಳಕಿಗೆ ಬಂದಿತ್ತು. ಈ ಕು-ರಿತು ಚಿಂಚೋಳಿ ತಾಲ್ಲೂಕಿನ ಸುಲೇಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ತನಿಖೆ ನಡೆಸಿದ್ದ ಸಿಪಿಐ ಜಗದೀಶ ಕೆ.ಜಿ. ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.ಪ್ರಕರಣದ ವಿಚಾರಣೆ ನಡೆಸಿದ್ದ 4ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಸೇಡಂ ಪೀಠದ ನ್ಯಾಯಾಧೀಶ ಸಿರಾಜುದ್ದೀನ್ ಎ. ಅವರು ಅಪರಾಧಿಗಳಿಗೆ ಶಿಕ್ಷೆ ವಿಧಿಸಿದ್ದಾರೆ. ರೂ.2.39 ಲಕ್ಷ ದಂಡದ ಮೊತ್ತದಲ್ಲಿ ತಲಾ ರೂ.1 ಲಕ್ಷವನ್ನು ರಾಮಣ್ಣ ಅವರ ಇಬ್ಬರು ಮಕ್ಕಳಿಗೆ ಪರಿಹಾರವಾಗಿ ನೀಡಬೇಕು ಎಂದು ಆದ-ೕಶದಲ್ಲಿ ತಿಳಿಸಿದ್ದಾರೆ.ಸರ್ಕಾರದ ಪರವಾಗಿ ಸರ್ಕಾರಿ

## ಶ್ರೀ ಸಿದ್ದರಾಮೇಶ್ವರ ಕಣ್ಣಿನ ಆಸ್ಪತ್ರೆಯಲ್ಲಿ ಆಧುನಿಕ ತಂತ್ರಜ್ಞಾನದೊಂದಿಗೆ ಅತ್ಯಾಧುನಿಕ ಕಣ್ಣಿನ ಪೊರೆ ಚಿಕಿತ್ಸೆ




ಕಲಬುರಗಿ: ಇಂದು (ಅ.8) ವಿಶ್ವ ದೃಷ್ಟಿ ದಿನ. ಈ ದಿನದ ಅಂಗವಾಗಿ ನಗರದ ಕೇಂದ್ರ ಬಸ್ ನಿಲ್ದಾಣ ಹತ್ತಿರದ ಶ್ರೀ ಸಿದ್ದರಾಮೇಶ್ವರ ಕಣ್ಣಿನ ಆಸ್ಪತ್ರೆಯು ಕಣ್ಣಿನ ಆರೋಗ್ಯಕ್ಕೆ ಆದ್ಯತೆ ನೀಡುವಂತೆ ಹಾಗೂ ನಿಯಮಿತ ಕಣ್ಣಿನ ತಪಾಸಣೆ, ಆರಂಭಿಕ ಪತ್ತೆ ಮತ್ತು ಸಮಯೋಚಿತ ಚಿಕಿತ್ಸೆಗೆ ಮುಂದಾಗುವಂತೆ ಸಾರ್ವಜನಿಕರಿಗೆ ಕರೆ ನೀಡಿದೆ. ಆಸ್ಪತ್ರೆಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಆಸ್ಪತ್ರೆಯ ಸಂಸ್ಥಾಪಕರಾದ ಡಾ.ವಿಶ್ವನಾಥ ರೆಡ್ಡಿ, ಹಿರಿಯ ನೇತ್ರ ತಜ್ಞರಾದ ಡಾ.ರಾಜಶ್ರೀ ವಿ.ರೆಡ್ಡಿ ಹಾಗೂ ಡಾ.ಸಿದ್ದಲಿಂಗ ರೆಡ್ಡಿ ಅವರು, ವಿಶ್ವ ದೃಷ್ಟಿ ದಿನದಂದು ಆಸ್ಪತ್ರೆಯು ಅತ್ಯಾಧುನಿಕ ಟಾಪಿಕಲ್ ಫ್ಯಾಕೋ ಎಮಲ್ಸಿಫಿಕೇಶನ್ ಚಿಕಿತ್ಸಾ ವಿಧಾನವನ್ನು ವಿಶೇಷವಾಗಿ ಪರಿಚಯಿಸುತ್ತಿದೆ. ಈ ಆಧುನಿಕ ಕಣ್ಣಿನ ಪೊರೆ ಚಿಕಿತ್ಸೆಯಲ್ಲಿ ಕಣ್ಣಿಗೆ ಇಂಜೆಕ್ಷನ್ ನೀಡದೆ, ಟಾಪಿಕಲ್ ಅನಸ್ತೇಶಿಯಾ (ಕಣ್ಣಿನ ಹನಿಗಳ ಮೂಲಕ ಅರಿವಳಿಕೆ) ಬಳಸಿ ಶಸ್ತ್ರ ಚಿಕಿತ್ಸೆ ನಡೆಸಲಾಗುತ್ತಿದೆ. ಈ ವಿಧಾನವು ಸಾಮಾನ್ಯವಾಗಿ ಕಡಿಮೆ ಅಸ್ವಸ್ಥತೆ, ಹೊಲಿಗೆಗಳ ಅಗತ್ಯವಿಲ್ಲದ ಶಸ್ತ್ರ ಚಿಕಿತ್ಸೆ ಹಾಗೂ ವೇಗವಾದ ದೃಷ್ಟಿ ಚೇತರಿಕೆ ಒದಗಿಸುವ ಉದ್ದೇಶ ಹೊಂದಿದೆ. ಚಿಕಿತ್ಸೆಯ ಫಲಿತಾಂಶವು ಪ್ರತಿ ರೋಗಿಯ ಕಣ್ಣಿನ ಸ್ಥಿತಿ ಮತ್ತು ವೈದ್ಯಕೀಯ ಸೂಕ್ಷ್ಮತೆಯನ್ನು ಅವಲಂಬಿಸಿರುತ್ತದೆ ಎಂದು ತಿಳಿಸಿದರು.

ವಿಶ್ವಮಟ್ಟದ ಡಯಾಗ್ನೋಸ್ಟಿಕ್ ವ್ಯವಸ್ಥೆ

ಶ್ರೀ ಸಿದ್ದರಾಮೇಶ್ವರ ಕಣ್ಣಿನ ಆಸ್ಪತ್ರೆಯಲ್ಲಿ ಕಣ್ಣಿನ ಪೊರೆ ರೋಗಿಗಳನ್ನು ಅತ್ಯಾಧುನಿಕ ಡಯಾಗ್ನೋಸ್ಟಿಕ್ ತಂತ್ರಜ್ಞಾನದ ಮೂಲಕ ಪರೀಕ್ಷಿಸಿ, ಆಧುನಿಕ ಶಸ್ತ್ರ ಚಿಕಿತ್ಸಾ ವ್ಯವಸ್ಥೆಗಳ ಸಹಾಯದಿಂದ ಚಿಕಿತ್ಸೆ ನೀಡಲಾಗುತ್ತದೆ. ರಟಿನಾದ ಅತ್ಯಾಧುನಿಕ ವೈಡ್ ಫೀಲ್ಡ್ ಚಿತ್ರಣ, ಲೆನ್ಸ್ ಲೆಕ್ಕಾಚಾರಕ್ಕಾಗಿ ಅತ್ಯಾಧುನಿಕ ಆಪ್ಟಿಕಲ್ ಬಯೋಮೆಟ್ರಿ, ಕಾರ್ನಿಯಾದ ವಿವರವಾದ ಟೊಪೋಗ್ರಫಿ ಮತ್ತು ಟೊಮೋಗ್ರಫಿ ಪರೀಕ್ಷೆ, ರೆಟಿನಾ ಮತ್ತು ಆಪ್ಟಿಕ್ ನರದ ಹೈ-ರೆಸಲ್ಯೂಷನ್ ಚಿತ್ರಣ, ಶಸ್ತ್ರ ಚಿಕಿತ್ಸಾ ವಿಭಾಗದಲ್ಲಿ ನಿಖರವಾದ ನೇತ್ರ ಶಸ್ತ್ರ ಚಿಕಿತ್ಸೆಗಾಗಿ ಅತ್ಯಾಧುನಿಕ ಮೈಕ್ರೋಸ್ಕೋಪ್, ಅತ್ಯಾಧುನಿಕ ಫ್ಯಾಕೋ ಎಮಲ್ಸಿಫಿಕೇಶನ್ ವ್ಯವಸ್ಥೆ, ನಿಖರವಾದ ಶಸ್ತ್ರ ಚಿಕಿತ್ಸಾ ಯೋಜನೆ ಮತ್ತು ಜೀವನ ಶೈಲಿಗೆ ಅನುಗುಣವಾಗಿ ಆಧುನಿಕ ತಂತ್ರಜ್ಞಾನ ಈ ಅತ್ಯಾಧುನಿಕ ತಂತ್ರಜ್ಞಾನಗಳು ನಿಖರವಾದ ರೋಗನಿರ್ಣಯ, ಸೂಕ್ತ ಶಸ್ತ್ರ ಚಿಕಿತ್ಸಾ ಯೋಜನೆ ಮತ್ತು ಉತ್ತಮ ಚಿಕಿತ್ಸಾ ಫಲಿತಾಂಶಗಳಿಗೆ ಸಹಕಾರಿಯಾಗುತ್ತವೆ. ಪ್ರತಿಯೊಬ್ಬ ರೋಗಿಯ ಕಣ್ಣಿನ ಸ್ಥಿತಿ, ಅಗತ್ಯತೆ ಮತ್ತು ಜೀವನ ಶೈಲಿಗೆ ಅನುಗುಣವಾಗಿ ಚಿಕಿತ್ಸೆಯನ್ನು ಮಾಡಲಾಗುತ್ತದೆ ಎಂದು ತಿಳಿಸಿದರು.

ಒಂದೇ ಸೂರಿನಡಿ ಸಮಗ್ರ ನೇತ್ರ ಚಿಕಿತ್ಸಾ ಸೇವೆಗಳು

ಶ್ರೀ ಸಿದ್ದರಾಮೇಶ್ವರ ಕಣ್ಣಿನ ಆಸ್ಪತ್ರೆಯಲ್ಲಿ ರೆಟಿನಾ ಮತ್ತು ವಿಟ್ರಿಯಸ್ ಕಾಯಿಲೆಗಳು, ರೆಟಿನಲ್ ಲೇಸರ್ ಚಿಕಿತ್ಸೆ, ಗ್ಲಾಕೋಮಾ, ಕಾರ್ನಿಯಾ, ಡ್ರೈ ಐ, ಲಾಸಿಕ್ ಮತ್ತು ರಿಫ್ಯಾಕ್ಟಿವ್ ಸರ್ಜರಿ, ಮಕ್ಕಳ ನೇತ್ರ ಚಿಕಿತ್ಸೆ, ಕಾಂಟ್ಯಾಕ್ಟ್ ಲೆನ್ಸ್ ಹಾಗೂ ಕಡಿಮೆ ದೃಷ್ಟಿ ಸಹಾಯಕ ಸಾಧನಗಳು ಸೇರಿದಂತೆ ವಿವಿಧ ವಿಶೇಷ ನೇತ್ರ ಚಿಕಿತ್ಸಾ ಸೇವೆಗಳು ಲಭ್ಯವಿದ್ದು, ದೃಷ್ಟಿಯು ನಮ್ಮ ಶಿಕ್ಷಣ, ಉದ್ಯೋಗ, ಚಲನವಲನ ಮತ್ತು ಸ್ವತಂತ್ರ ಜೀವನಕ್ಕೆ ಅತ್ಯಂತ ಮಹತ್ವದ್ದಾಗಿದೆ. ಅನೇಕ ಕಣ್ಣಿನ ಕಾಯಿಲೆಗಳು ಆರಂಭಿಕ ಹಂತದಲ್ಲಿ ಯಾವುದೇ ಸ್ಪಷ್ಟ ಲಕ್ಷಣಗಳಿಲ್ಲದೆ ಬೆಳೆಯಬಹುದು, ಆದ್ದರಿಂದ ವಯೋವೃದ್ಧರು, ಮಧುಮೇಹ ಹೊಂದಿರುವವರು ಹಾಗೂ ಗ್ಲಾಕೋಮಾ ಅಥವಾ ಇತರೆ ಕಣ್ಣಿನ ಕಾಯಿಲೆಗಳ ಕುಟುಂಬದ ಇತಿಹಾಸ ಹೊಂದಿರುವವರು ನಿಯಮಿತವಾಗಿ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ತಿಳಿಸಿದರು. ಶ್ರೀ ಸಿದ್ದರಾಮೇಶ್ವರ ಆಸ್ಪತ್ರೆಯು ಕಲಬುರಗಿ, ಸೇಡಂ, ಕಮಲಾಪುರ ಮತ್ತು ಸೇಲೇಪೇಟ್ ಘಟಕಗಳ ಮೂಲಕ ಈ ಭಾಗದ ಜನರಿಗೆ ಗುಣಮಟ್ಟದ ಮತ್ತು ಅತ್ಯಾಧುನಿಕ ನೇತ್ರ ಚಿಕಿತ್ಸೆಯನ್ನು ತಲುಪಿಸಲು ನಿರತಂರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು. ಆಸ್ಪತ್ರೆಯ ನೇತ್ರ ತಜ್ಞರಾದ ಡಾ.ರಾಜೇಶ್ವರಿ ಎಸ್.ರೆಡ್ಡಿ, ಡಾ.ವಿಶಾಲ ಕೋರವಾರ್, ಡಾ.ವಿವೇಕ್ ಮೋಳಕೇರಿ, ಡಾ.ಆಯೆಷಾ ನಿಖತ್, ಎಸ್.ಎಸ್.ಹಿರೇಮಠ ಮತ್ತು ಎಸ್.ಎಸ್.ರೆಡ್ಡಿ ಅವರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಶರಣಬಸವ ವಿಶ್ವವಿದ್ಯಾಲಯದ 30 ವಿದ್ಯಾರ್ಥಿಗಳಿಗೆ 3 ಲಕ್ಷ ರೂ. ವಾರ್ಷಿಕ ಪ್ಯಾಕೇಜ್‌ನ ಉದ್ಯೋಗಾವಕಾಶ



ಕಲಬುರಗಿ: ಶರಣಬಸವ ವಿಶ್ವವಿದ್ಯಾಲಯ ಹಾಗೂ ಸುರಪುರದ ವೀರಪ್ಪ ನಿಷ್ಠಿ ಇಂಜಿನಿಯರಿಂಗ್ ಕಾಲೇಜಿನ ಒಟ್ಟು 30 ವಿದ್ಯಾರ್ಥಿಗಳು ವಿಶ್ವವಿದ್ಯಾಲಯದ ವತಿಯಿಂದ ಇತ್ತೀಚೆಗೆ ಆಯೋಜಿಸಲಾಗಿದ್ದ ಕ್ಯಾಂಪಸ್ ನೇಮಕಾತಿ ಪ್ರಕ್ರಿಯೆಯಲ್ಲಿ ಯಶಸ್ವಿಯಾಗಿ ಆಯ್ಕೆಯಾಗಿದ್ದಾರೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮೂರು ತಿಂಗಳ ಕಡ್ಡಾಯ ಇಂಟರಶಿಪ್ ಜೊತೆಗೆ ವಾರ್ಷಿಕ 3 ಲಕ್ಷದ ಆಕರ್ಷಕ ವೇತನ ಪ್ಯಾಕೇಜನೊಂದಿಗೆ ಖಾಯಂ ಉದ್ಯೋಗದ ಅವಕಾಶ ಕಲ್ಪಿಸಲಾಗಿದೆ.

ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ ಅವರು ಬಿಡುಗಡೆ ಮಾಡಿರುವ ಪತ್ರಿಕಾ ಪ್ರಕಟಣೆಯಲ್ಲಿ ಈ ಕು-ರಿತು ಮಾಹಿತಿ ನೀಡಿದ್ದು, ಆಯ್ಕೆಯಾದ ವಿದ್ಯಾರ್ಥಿಗಳು ತಮ್ಮ ಇಂಜಿನಿಯರಿಂಗ್ ಪದವಿ ಕೋರ್ಸ್‌ನ ಭಾಗವಾಗಿ ಬೆಂಗಳೂ-ರಿನ ಎಕೋ ಬ್ರೇನ್ ಟೆಕ್ನಾಲಜೀಸ್ ಕಚೇ-ರಿಯಲ್ಲಿ ಮೂರು ತಿಂಗಳ ಕಡ್ಡಾಯ ಇಂಟ-ರಶಿಪ್ ಪೂರ್ಣಗೊಳಿಸಬೇಕು. ಇಂಟರ್‌ಶಿಪ್ ಪೂರ್ಣಗೊಂಡ ಬಳಿಕ ವಿದ್ಯಾರ್ಥಿಗಳನ್ನು ಸಂಸ್ಥೆಯಲ್ಲಿ ಖಾಯಂ ಸಿಬ್ಬಂದಿಯಾಗಿ ನೇಮಕ ಮಾಡಿಕೊಳ್ಳಲಾಗುವುದು. ಈ ವೇಳೆ ಅವ-ರಿಗೆ ವಾರ್ಷಿಕ 3 ಲಕ್ಷದ ವೇತನ ಪ್ಯಾಕೇಜ್ ದೊರೆಯಲಿದೆ ಎಂದು ತಿಳಿಸಿದ್ದಾರೆ.

ಎಕೋ ಬ್ರೇನ್ ಟೆಕ್ನಾಲಜೀಸ್ ಹಾಗೂ ಡೆಕ್ಸಿಸ್ ಇನ್ಫೋ ಸರ್ವಿಸಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಗಳ ಸಹಯೋಗದಲ್ಲಿ ಈ ಕ್ಯಾಂಪಸ್ ನೇಮಕಾತಿ ಪ್ರಕ್ರಿಯೆ, ಶರಣಬಸವ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿ ಆಯೋಜಿಸಲಾಗಿ-ತ್ತು. ವಿಶ್ವವಿದ್ಯಾಲಯದ ವಿವಿಧ ಇಂಜಿನಿಯರಿಂಗ್ ವಿಭಾಗಗಳ ಸುಮಾರು 500 ವಿದ್ಯಾರ್ಥಿಗಳು ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಆಶ್ರಯದಲ್ಲಿ ನಡೆಯುತ್ತಿರುವ ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಸಂಂ-ೕಜನೆಗೊಂಡಿರುವ ಸುರಪುರದ ವೀರಪ್ಪ ನಿಷ್ಠಿ ಇಂಜಿನಿಯರಿಂಗ್ ಕಾಲೇಜಿನ 70 ವಿದ್ಯಾರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರು.

ಈ ಪೈಕಿ ಶರಣಬಸವ ವಿಶ್ವವಿದ್ಯಾಲಯದ 26 ವಿದ್ಯಾರ್ಥಿಗಳು ಉದ್ಯೋಗಕ್ಕೆ ಆಯ್ಕೆಯಾದರೆ, ವೀರಪ್ಪ ನಿಷ್ಠಿ ಇಂಜಿನಿಯರಿಂಗ್ ಕಾಲೇಜಿನ ನಾಲ್ವರು ವಿದ್ಯಾರ್ಥಿಗಳು ನೇಮಕಾತಿ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ, ಶರಣಬಸವೇಶ್ವರ ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು ಆಶೀರ್ವದಿಸಿ ಶುಭ ಕೋ-ರಿದ್ದಾರೆ. ವಿಶ್ವವಿದ್ಯಾಲಯದ ಕುಲಸಚಿವೆ ಡಾ. ಲಕ್ಷ್ಮಿ ಪಾಟೀಲ ಮಕಾ, ಮೌಲ್ಯಮಾಪನ ಕುಲಸಚಿವ ಡಾ. ಎಸ್. ಎಚ್. ಹೊನ್ನಳ್ಳಿ, ಡೀನ್ ಡಾ. ಶಿವಕುಮಾರ ಜವಳಿಗಿ ಹಾಗೂ ಹಣಕಾಸು ಅಧಿಕಾರಿ ಡಾ. ಕಿರಣ ಮಕಾ ಅಭಿನಂದನೆ ಸಲ್ಲಿಸಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಮಾರ್ಗದರ್ಶನ ನೀಡಿದ ಬೋಧಕ ಸಿಬ್ಬಂದಿಯನ್ನೂ ಗಣ್ಯರು ಅಭಿನಂದಿಸಿದ್ದಾರೆ.

## ಚುನಾವಣಾ ಆಯೋಗದ ಮುಖ್ಯಸ್ಥರ ವಜಾಕ್ಕೆ ಆಗ್ರಹಿಸಿ ಪ್ರತಿಭಟನೆ ಮಹಿಳಾ ಪತ್ರಕರ್ತೆಗೆ ಅವಮಾನ ಆರೋಪ: ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಕೆ



ಆಳಂದ: ಚುನಾವಣಾ ಆಯೋಗದ ಮುಖ್ಯಸ್ಥ ಜ್ಞಾನೇಶ್ ಕುಮಾರ್ ಅವರನ್ನು ವಜಾಗೊಳಿಸಬೇಕು ಹಾಗೂ ಚುನಾವಣಾ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ಆಳಂದ ನಾಗರಿಕ ಸಮಿತಿಯಿಂದ ಬುಧವಾರ ಪಟ್ಟಣದ ತಾಲೂಕು ಆಡಳಿತ ಸೌಧದ ಎದುರು ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ತಾಲೂಕು ಆಡಳಿತ ಸೌಧದ ಮುಂಭಾಗದಲ್ಲಿ ಧರಣಿ ನಡೆಸಿ, ಚುನಾವಣಾ ಆಯೋಗದ ಮುಖ್ಯಸ್ಥರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ತಹಶೀಲ್ದಾರ್ ಅಣ್ಣಾರಾವ್ ಪಾಟೀಲ್ ಅವರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹೋರಾಟಗಾರ ರಮೇಶ್ ಲೋಹಾರ್, ದೇಶದ ವಿವಿಧ ರಾಜ್ಯಗಳಲ್ಲಿ ನಡೆದ ಚುನಾವಣೆಗಳ ಕುರಿತು ಹಲವು ಅನುಮಾನಗಳು ಮತ್ತು ಆರೋಪಗಳು ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿವೆ. ಜನರು ತಮ್ಮ ಆಶೋತ್ತರಗಳಿಗೆ ಅನುಗುಣವಾಗಿ ಆಯ್ಕೆ ಮಾಡಿದ ಸರ್ಕಾರಗಳು ಅಧಿಕಾರಕ್ಕೆ ಬರದಿರುವುದಕ್ಕೆ ಚುನಾವಣಾ ಪ್ರಕ್ರಿಯೆಯಲ್ಲಿನ ಅಕ್ರಮಗಳೇ ಕಾರಣವೆಂಬ ಆರೋಪಗಳು ಕೇಳಿಬರುತ್ತಿವೆ ಎಂದು ಹೇಳಿದರು.

ಚುನಾವಣಾ ವ್ಯವಸ್ಥೆಯ ಪಾರದರ್ಶಕತೆ ಹಾಗೂ ವಿಶ್ವಾಸಾರ್ಹತೆಯನ್ನು ಕಾಪಾಡುವುದು ಚುನಾವಣಾ ಆಯೋಗದ ಪ್ರಮುಖ ಹೊಣೆಗಾರಿಕೆಯಾಗಿದೆ. ಆದ-ೕರೆ, ಇತ್ತೀಚಿನ ಬೆಳವಣಿಗೆಗಳು ಪ್ರಜಾಪ್ರಭುತ್ವ ವ್ಯವಸ್ಥೆಯ ಕುರಿತು ಜನರಲ್ಲಿ ಆತಂಕ ಮೂಡಿಸಿವೆ ಎಂದು ಅವರು ಹೇಳಿದರು.

ದೆಹಲಿ ಜಂತರ್‌ಮಂತರನಲ್ಲಿ ರೈತರು, ವಿದ್ಯಾರ್ಥಿಗಳು ಹಾಗೂ ವಿವಿಧ ಸಂಘಟನೆಗಳು ನಡೆಸುತ್ತಿರುವ ಹೋರಾಟಕ್ಕೆ ಬೆಂಬಲ ವ್ಯಕ್ತವಾಗುತ್ತಿದೆ. ಈ ಹೋರಾಟದ ಸಂದರ್ಭದಲ್ಲಿ ಮಹಿಳಾ ಪತ್ರಕರ್ತೆಯೊಬ್ಬರೊಂದಿಗೆ ಪೊಲೀಸ್ ಅಧಿಕಾ-ರಿಯೊಬ್ಬರು ಅವಮಾನಕರವಾಗಿ ವರ್ತಿಸಿದ್ದಾರೆ ಎಂಬ ಆರೋಪವೂ ಕೇಳಿಬಂದಿದ್ದು, ಘಟನೆಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮಹಿಳಾ ಪತ್ರಕರ್ತೆಯೊಂದಿಗೆ ನಡೆದಿರುವುದಾಗಿ ಆರೋಪಿಸಲಾಗಿರುವ ಘಟನೆ ಪೊಲೀಸ್ ಇಲಾಖೆಯ ಘನತೆಗೂ ಧಕ್ಕೆ ತರುವಂತದ್ದು. ಇಂತಹ ಪ್ರಕರಣಗಳ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಈ ಕುರಿತು ಹೊಣೆಗಾರಿಕೆ ವಹಿಸಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅಬ್ದುಲ್ ಸಲಾಂ ಸಗರಿ, ಕಿಸಾನ್ ಸಭಾ ರಾಜ್ಯ ಕಾರ್ಯಾಧ್ಯಕ್ಷ ಮೌಲಾ ಮುಲ್ಲಾ, ತಾಲೂಕು ಅಧ್ಯಕ್ಷ ಧರ್ಮಣ್ಣ ಪೂಜಾರಿ, ಬಾಬುರಾವ್ ಅರುಣೋದಯ ಸೇರಿದಂತೆ ಮುಖಂಡರು ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿ, ಚುನಾವಣಾ ವ್ಯವಸ್ಥೆಯ ಪಾರದರ್ಶಕತೆ ಮತ್ತು ಸಂವಿಧಾನಾತ್ಮಕ ಮೌಲ್ಯಗಳನ್ನು ರಕ್ಷಿಸುವ ಅಗತ್ಯವಿದೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಬಾಬುರಾವ್ ಮಡ್ಡೆ, ಅಮ್ಜಾದ್ ಅಲಿ, ಕರಜಗಿ , ಕಬೀರ ಆಪಾ, ಬಾಕರ್ ಅಲಿ ಜಮಾದಾರ್, ಶ್ರೀಮಂತ ನಡಗೇರಿ, ರಮೇಶ್ ಹತ್ತಿ, ಕಾಳೆ ಆರಿಫ್, ಲಂಗಡೇ, ಪಂಡಿತ್ ಸಲಗರ್, ರತನಚಂದ ಕಲಶೆಟ್ಟಿ ಸೇ-ರಿದಂತೆ ಹಲವರು ಭಾಗವಹಿಸಿದ್ದರು.

ಮನವಿ ಸ್ವೀಕರಿಸಿದ ತಹಶೀಲ್ದಾರ್ ಅಣ್ಣಾರಾವ್ ಪಾಟೀಲ್, ಮನವಿಯನ್ನು ರಾಷ್ಟ್ರಪತಿಗಳ ಕಚೇರಿಗೆ ಕಳುಹಿಸಿಕೊಡುವುದಾಗಿ ಭರವಸೆ ನೀಡಿದರು. ಬಳಿಕ ಪ್ರತಿಭಟನೆಯನ್ನು ಹಿಂಪಡೆಯಲಾಯಿತು.

## ಅಕ್ರಮ ವಿದ್ಯುತ್ ಬಳಕೆ: ಜಾಗೃತದಳಕ್ಕೆ ಮಾಹಿತಿ ನೀಡಲು ಮನವಿ

ಕಲಬುರಗಿ: ಜೆಸ್ಕಾಂ ವ್ಯಾಪ್ತಿಯಲ್ಲಿ ವಿದ್ಯುತ್ ಕಳ್ಳತನ, ಅಕ್ರಮ ವಿದ್ಯುತ್ ಸಂಪರ್ಕ ಅಥವಾ ವಿದ್ಯುತ್ ದುರ್ಬಳಕೆ ಕಂಡುಬಂದಲ್ಲಿ ಸಾರ್ವಜನಿಕರು ಜಾಗೃತದಳದ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಜೆಸ್ಕಾಂ ಕೋರಿದೆ.

ಕಲಬುರಗಿ ವ್ಯಾಪ್ತಿಯಲ್ಲಿ ಆರ್. ಲತಾ (ಎ.ಇ.ಇ.)-9448450057, ಸೋಮರಾಜ ಪಾಟೀಲ (ಎ.ಇ.) -9480844228, ಅಮರಸಿಂಗ್ (ಎ.ಇ.) 9480844522 ಹಾಗೂ ದ್ರುವತಾರ (ಪಿ.ಐ.) -9448470132 ಅವರನ್ನು ಸಂಪರ್ಕಿಸಿ ಮಾಹಿತಿ ನೀಡಬಹುದು.

ವಿದ್ಯುತ್ ಕಳ್ಳತನ ಹಾಗೂ ಅಕ್ರಮ ವಿದ್ಯುತ್ ಬಳಕೆಯನ್ನು ತಡೆಗಟ್ಟುವಲ್ಲಿ ಸಾರ್ವಜನಿಕರ ಸಹಕಾರ ಅಗತ್ಯವಾಗಿದ್ದು, ಮಾಹಿತಿ ನೀಡುವವರ ವಿವರಗಳನ್ನು ಗೌಪ್ಯವಾಗಿಡಲಾಗುವುದು ಎಂದು ಜೆಸ್ಕಾಂ ತಿಳಿಸಿದೆ.

## ಶಿವಶರಣ ಮಾದರ ಚನ್ನಯ್ಯನವರ ಹೆಸರಿನಲ್ಲಿ ಹೆಬ್ಬಾಗಿಲು ನಿರ್ಮಿಸಲು ಡಿಸಿಗೆ ಮನವಿ

ಕಲಬುರಗಿ: ನಗರದ ಜೇವರ್ಗಿ ಪಟ್ಟಣಕ್ಕೆ ತೆರಳುವ ರಾಜ್ಯ ಹೆದ್ದಾರಿಯ ರಾಮಮಂದಿರ ವೃತ್ತದ ಸಮೀಪ 12ನೇ ಶತಮಾನದ ಶ್ರೇಷ್ಠ ಶರಣರಾದ ಶ್ರೀ ಶಿವಶರಣ ಮಾದರ ಚನ್ನಯ್ಯ ಅವರ ಹೆಸರಿನಲ್ಲಿ ಮುಖ್ಯ ದ್ವಾರ (ಹೆಬ್ಬಾಗಿಲು) ನಿರ್ಮಿಸುವಂತೆ ಕರ್ನಾಟಕ ರಾಜ್ಯ ಮಾದಿಗ ಸಮಾಜದ ಕಲಬುರಗಿ ವಿಭಾಗದ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಮಾಜದ ಮುಖಂಡರು, ಬಸವಣ್ಣನವರ ಕಾಲದಲ್ಲಿ ಸಮಾನತೆ, ಸರ್ವಧರ್ಮ ಸಮಭಾವ ಹಾಗೂ ಸಾಮಾಜಿ-ಕ ಏಳಿಗೆಗಾಗಿ ಶಿವಶರಣ ಮಾದರ ಚನ್ನಯ್ಯ ಅವರು ವಚನಗಳ ಮೂಲಕ ಮಹತ್ವದ ಕೊಡುಗೆ ನೀಡಿದ್ದಾರೆ. ಕಲ್ಯಾಣ ಕರ್ನಾಟಕದೊಂದಿಗೆ ಅವರ ಸಾಮಾಜಿಕ ಮತ್ತು ವೈಚಾರಿಕ ಕೊಡುಗೆ ಅವಿನಾಭಾವ ಸಂಬಂಧ ಹೊಂದಿದೆ ಎಂದು ತಿಳಿಸಿದರು.

ಮುಂದಿನ ಪೀಳಿಗೆಗೆ ಮಾದರ ಚನ್ನಯ್ಯ ಅವರ ವಚನಗಳು ಹಾಗೂ ಸಮಾನತೆಯ ಸಂದೇಶವನ್ನು ಪರಿಚಯಿಸುವ ಉದ್ದೇಶದಿಂದ, ಅವರ ಸವಿ ನೆನಪಿಗಾಗಿ ನಗರದ ಪ್ರಮುಖ ಸ್ಥಳದಲ್ಲಿ ಹೆಬ್ಬಾಗಿಲು ನಿರ್ಮಿಸುವುದು ಸೂಕ್ತವಾಗಿದೆ. ಆದ್ದರಿಂದ ರಾಮಮಂದಿರ ವೃತ್ತದ ಸಮೀಪ ರಾಜ್ಯ ಹೆದ್ದಾರಿಯಲ್ಲಿ ಅವರ ಹೆಸ-ರಿನಲ್ಲಿ ಮುಖ್ಯ ದ್ವಾರ ನಿರ್ಮಿಸಲು ಅಗತ್ಯ ಅನುಮತಿ ಹಾಗೂ ಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತವನ್ನು ಕೋರಿದರು. ಕರ್ನಾಟಕ ರಾಜ್ಯ ಮಾದಿಗ ಸಮಾಜದ ವಿಭಾಗೀಯ ಅಧ್ಯಕ್ಷ ಚಂದ್ರಕಾಂತ ಕೆ. ನಾಟಿಕಾರ, ಜಿಲ್ಲಾ ಅಧ್ಯಕ್ಷ ಸಿದ್ದಲಿಂಗ ಕಟ್ಟಿಮನಿ, ಹಿರಿಯ ಉಪಾಧ್ಯಕ್ಷ ಮಹಾದೇವಪ್ಪ ಕವಳೆ, ಜೈರಾಜ ಕಿಣಗೀಕರ್, ಹಲವರು ಉಪಸ್ಥಿತರಿದ್ದರು.

# ಮಕ್ಕಳು ಸವಿಯಲಿ ಮನೆ ಅಡುಗೆಯ




ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ – ಗದಗ

■ **ಉದಯರಶ್ಮಿ ದಿನಪತ್ರಿಕೆ**

ಪ್ರಪಂಚದ ಯಾವುದೇ ಮೂಲೆಯಲ್ಲಿ ನೋಡಿದರೂ ನಾವು ಕಿವಿ ಕೇಳಿಸದ, ಕಣ್ಣು ಕಾಣದ, ಮಾತನಾಡಲು ಬಾರದ ಜನರನ್ನು ಅಲ್ಲಲ್ಲಿ ಕಾಣಬಹುದು. ಇವರಲ್ಲಿ ಈ ನ್ಯೂನತೆಗಳು ಹುಟ್ಟಿನಿಂದಲೂ ಬಂದಿರಬಹುದು ಇಲ್ಲವೇ ಹುಟ್ಟಿದ ಕೆಲವು ವರ್ಷಗಳ ನಂತರ, ಇಲ್ಲವೇ ಯಾವುದೋ ಆಕಸ್ಮಿಕಗಳಲ್ಲಿ ಜೊತೆಗೂಡಿದಂತಹ ತೊಂದರೆಗಳಾಗಿರಬಹುದು. ಆದರೆ ಜಗತ್ತಿನ ಯಾವುದೇ ಭಾಗದಲ್ಲಿ ರುಚಿಯನ್ನು ಕಳೆದುಕೊಂಡ ನಾಲಿಗೆಯ ಕುರಿತು ಎಲ್ಲಾದರೂ ಕೇಳಿರುವಿರಾ? ಹುಟ್ಟಿದ ಮಗುವಿನ ನಾಲಿಗೆಗೆ ಗೊತ್ತಾಗುವಷ್ಟೇ ರುಚಿ ವಯಸ್ಸಾದ ವೃದ್ಧನಿಗೂ ಇರುತ್ತದೆ. ಪಂಚೇಂದ್ರಿಯಗಳಲ್ಲಿ ಉಳಿದೆಲ್ಲ ಅಂಗಗಳು ಮಗುವಿನ ಶೈಶವಾವಸ್ಥೆಯಿಂದ ಕ್ರಿಯಾಶೀಲವಾಗಿದ್ದು ವಯಸ್ಸಾದಂತೆ ತಮ್ಮ ಕಾರ್ಯ ನಿರ್ವಹಣೆಯ ಸಾಮರ್ಥ್ಯದಲ್ಲಿ ಕುಂಠಿತತೆಯನ್ನು ಹೊಂದಿದರೆ, ನಾಲಿಗೆ ಮಾತ್ರ ಆಬಾಲ ವೃದ್ಧರಾದಿಯಾಗಿ ಎಲ್ಲರಲ್ಲೂ ಅಷ್ಟೇ ಚುರುಕಾಗಿ ಕಾರ್ಯನಿರ್ವಹಿಸುತ್ತದೆ. ಇದಕ್ಕೆ ಕಾರಣ ನಾಲಿಗೆ ನಮ್ಮ ಮೆದುಳಿಗೆ ಅತ್ಯಂತ ಹತ್ತಿರದಲ್ಲಿ ಇದೆ ಎಂದು ಪ್ರಾಜ್ಞರು ಹೇಳುತ್ತಾರೆ.

ನಮ್ಮ ಮೆದುಳಿನಲ್ಲಿರುವ ಸೆನ್ಸಾರ್ ನರ್ವಗಳ ( ಅರಿವಿನ ನರವ್ಯೂಹ) ಮೂಲಕ ನಾವು ಕೇಳುವ, ನೋಡುವ, ಸ್ಪರ್ಶಿಸುವ, ವಾಸನೆಯನ್ನು ಗ್ರಹಿಸುವ ಶಕ್ತಿಯನ್ನು ಹೊಂದಿದ್ದೇವೆ, ಅಂತೆಯೇ ನಮ್ಮ ನಾಲಿಗೆಯೂ ಕೂಡ ಅತ್ಯಂತ ತ್ವರಿತವಾಗಿ ರುಚಿಯನ್ನು ಗ್ರಹಿಸಿ ಹೇಳುವ ಶಕ್ತಿಯನ್ನು ಹೊಂದಿದೆ.

ಅಡುಗೆಮನೆಯಲ್ಲಿನ ಹಲವಾರು ವಿಷಯಗಳನ್ನು ವಸ್ತುಗಳನ್ನು ಅರಿತುಕೊಳ್ಳುವ ಶಕ್ತಿಯನ್ನು ಹೊಂದಿರುವುದು ನಾಲಿಗೆ. ಯಾವುದೋ ಒಂದು ಆಹಾರವನ್ನು ಸೇವಿಸಿದಾಗ ಅದನ್ನು ಈ ಮುಂಚೆ ಸೇವಿಸಿದ ನೆನಪಾಗಬಹುದು. ಚಿಕ್ಕಂದಿನಲ್ಲಿ ಅಮ್ಮ ಮಾಡಿ ತಿನ್ನಿಸಿದ ಯಾವುದೋ ಒಂದು ಅಡುಗೆ ನಮ್ಮ ನೆನಪಿನ ಕಣಜದಲ್ಲಿ ಉಳಿದುಕೊಂಡಿರಬಹುದು ಇಂದಿಗೂ ಆ ರುಚಿ ಅದರ ನೋಟ ನಮ್ಮ ನೆನಪಿನಿಂದ ಮರೆಯಾಗದೇ ಇರಲು ಕಾರಣ ನಾಲಿಗೆಯ ಪ್ರಖರ



ಗುಣ ಗ್ರಹಣ ಶಕ್ತಿ.

ನಾವು ನೋಡುವ ನೋಟದಲ್ಲಿ ನಾವು ರಾಜಿ ಮಾಡಿಕೊಳ್ಳಬಹುದು, ನಾವು ಕೇಳುವ ಸಂಗೀತದಲ್ಲಿ ಕೂಡ ನಾವು ರಾಜಿ ಮಾಡಿಕೊಳ್ಳಬಹುದು, ಆದರೆ ನಾವು ತಿನ್ನುವ ಆಹಾರದಲ್ಲಿ ನಮಗಿಷ್ಟವಿಲ್ಲದ ರುಚಿಯನ್ನು ತಿನ್ನಲು ರಾಜಿ ಮಾಡಿಕೊಳ್ಳಲು ಸಾಧ್ಯ ಆಗುವುದೇ ಇಲ್ಲ. ಒಂದು ದಿನ ಚಲನಚಿತ್ರ ನೋಡಲು ಆಗುವುದಿಲ್ಲ ಎಂದಾದರೆ ಇರಲಿ ಬಿಡು ಎನ್ನುವ ನಾವುಗಳು ಒಂದು ದಿನ ಊಟ ಸಿಗುವುದಿಲ್ಲ ಎಂದರೆ ಹೋಗಲಿ ಬಿಡು ಎನ್ನಲು ಸಾಧ್ಯವೇ? ಖಂಡಿತವಾಗಿಯೂ ಇಲ್ಲ.

ಹಸಿವು ನಮ್ಮ ಮಾನಸಿಕ ಮತ್ತು ದೈಹಿಕ ಅವಶ್ಯಕತೆ ಆಗಿರುವುದರಿಂದ ಅದನ್ನು ಶತಾಯಗತಾಯ ಪೂರೈಸಿಕೊಳ್ಳಬೇಕು. ಜಿಹ್ವಾ ಚಾಪಲ್ಯವನ್ನು ಕಟ್ಟಿಡಲು

ಸಾಧ್ಯವೇ ಇಲ್ಲ. ಶಾಲೆಯಿಂದ ಮನೆಗೆ ಬಂದ ಮಗುವಿನ ಅವಶ್ಯಕತೆ ಆಹಾರ. ಎಲ್ಲರಿಗೂ ನೀಡುವಂತೆ ಮಗುವಿಗೂ ಆಹಾರವನ್ನು ಉಣಬಡಿಸಿದರೆ ಮಗು



> **ಹಸಿವು ನಮ್ಮ ಮಾನಸಿಕ ಮತ್ತು ದೈಹಿಕ ಅವಶ್ಯಕತೆ ಆಗಿರುವುದರಿಂದ ಅದನ್ನು ಶತಾಯಗತಾಯ ಪೂರೈಸಿಕೊಳ್ಳಬೇಕು. ಜಿಹ್ವಾ ಚಾಪಲ್ಯವನ್ನು ಕಟ್ಟಿಡಲು ಸಾಧ್ಯವೇ ಇಲ್ಲ. ಶಾಲೆಯಿಂದ ಮನೆಗೆ ಬಂದ ಮಗುವಿನ ಅವಶ್ಯಕತೆ ಆಹಾರ. ಎಲ್ಲರಿಗೂ ನೀಡುವಂತೆ ಮಗುವಿಗೂ ಆಹಾರವನ್ನು ಉಣಬಡಿಸಿದರೆ ಮಗು ಬೇರೊಂದು ತಿಂಡಿಗೆ ಆಸೆ ಪಡುವುದಿಲ್ಲ. ಹೊಟ್ಟೆ ತುಂಬದ ಮಗು ಮಾತ್ರ ಹತ್ತು ಹಲವು ತಿನಿಸುಗಳ ಕಡೆ ತಮ್ಮ ಚಿತ್ತವನ್ನು ಹರಿಸುತ್ತದೆ.**

ಬೇರೊಂದು ತಿಂಡಿಗೆ ಆಸೆ ಪಡುವುದಿಲ್ಲ. ಹೊಟ್ಟೆ ತುಂಬದ ಮಗು ಮಾತ್ರ ಹತ್ತು ಹಲವು ತಿನಿಸುಗಳ ಕಡೆ ತಮ್ಮ ಚಿತ್ತವನ್ನು ಹರಿಸುತ್ತದೆ

ಸಮಯ ಸಂದರ್ಭಗಳಿಗನುಸಾರವಾಗಿ ಮಕ್ಕಳಿಗೆ



ಮನೆಯಲ್ಲಿ ಎಲ್ಲ ರೀತಿಯ ತಿಂಡಿಗಳನ್ನು ಮಾಡಿ ಗುಣಪಡಿಸುವುದು ಸಾತ್ವಿಕ ಆಹಾರದ ಮಹತ್ವವನ್ನು ಹೇಳಿಕೊಡುವುದು.

ಹಬ್ಬ ಹುಣ್ಣಿಮೆಯ ಅಡುಗೆ ತಿಂಡಿಗಳಿಗೆ ಮಕ್ಕಳನ್ನು ತಯಾರು ಮಾಡಿ.. ಅಡುಗೆ ಮನೆಯ ಆಕರ್ಷಣೆಯ ಕೇಂದ್ರವಾಗಲಿ. ಸಾಂಪ್ರದಾಯಿಕ ಅಡುಗೆಗಳಾದ ಹೋಳಿಗೆ, ಸೀಕರಣೆ, ಹುಗ್ಗಿ, ಪಾಯಸ, ಕಡುಬು ವಡೆ

ಹಪ್ಪಳ ಸಂಡಿಗೆ ಕೋಸಂಬರಿಗಳ ರುಚಿ ಮಕ್ಕಳಿಗೆ ತೋರಿಸಿ.

ಹೊಟ್ಟೆಯ ಮೂಲಕ ಮನಸ್ಸನ್ನು ಗೆಲ್ಲಬೇಕು ಎಂದು ನಮ್ಮ ಹಿರಿಯರು ಹೇಳಿರುವುದು ಈ ಕಾರಣಕ್ಕೆ ಅಲ್ಲವೇ? ಅಮ್ಮನ ಕೈ ತುತ್ತು, ಅಜ್ಜಿಯ ಕೈಯ ಉಂಡೆ, ಚಕ್ಕುಲಿ, ಕೋಡುಬಳೆಗಳು ಮಕ್ಕಳನ್ನು ಆಯಸ್ಕಾಂತದಂತೆ ಸೆಳೆಯಲಿ..

# ಪ್ರತಿಯೊಬ್ಬರು ಕಣ್ಣಿನ ಆರೋಗ್ಯದ ಬಗ್ಗೆ ಕಾಳಜಿ, ಮುಂಜಾಗ್ರತೆ ವಹಿಸಿ

ಕಲಬುರಗಿ : ಇತ್ತೀಚಿನ ದಿನಗಳಲ್ಲಿ ಅತಿಯಾದ ಮೊಬೈಲ್ ಮತ್ತು ಕಂಪ್ಯೂಟರ್ ಬಳಕೆಯಿಂದ ಕಣ್ಣಿನ ದೃಷ್ಟಿಯ ಮೇಲೆ ಪರಿಣಾಮ ಬೀರುತ್ತಿದೆ. ಇದರಿಂದ ಕಣ್ಣಿನ ಪೊರೆ, ಗ್ಲುಕೋಮಾ, ಡಯಾಬಿಟಿಕ್ ರೆಟಿನೋಪತಿ ಸೇರಿದಂತೆ ಇತರ ದೀರ್ಘಕಾಲದ ಕಣ್ಣಿನ ಅಸ್ವಸ್ಥತೆಗಳು ಹೆಚ್ಚಾಗುತ್ತಿದೆ. ಆದ್ದರಿಂದ ಇವುಗಳ ಬಳಕೆ ಮಿತಗೊಳಿಸಬೇಕು. ಪ್ರತಿಯೊಬ್ಬರು ಕಣ್ಣಿನ ಆರೋಗ್ಯ ಬಗ್ಗೆ ಕಾಳಜಿ, ಮುಂಜಾಗ್ರತೆ ವಹಿಸಬೇಕು ಎಂದು ನೇತ್ರಾಧಿಕಾರಿ ಡಾ.ದಸ್ತಗಿರ್ ಸಲಹೆ ನೀಡಿದರು.

ನಗರದ ಆಳಂದ ರಸ್ತೆಯ ಜೆ.ಆರ್ ನಗರದಲ್ಲಿನ 'ಸಕ್ಸಸ್ ಕಂಪ್ಯೂಟರ್ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ "29ನೇ ವಿಶ್ವ ದೃಷ್ಟಿ ದಿನಾಚರಣೆ"ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಲು ಪೌಷ್ಟಿಕಾಂಶವಳ್ಳ ಸಮತೋಲಿತ ಆಹಾರ, ನಿಯಮಿತ ಕಣ್ಣಿನ ಪರೀಕ್ಷೆ, ಪ್ರತಿ 20 ನಿಮಿಷಗಳಿಗೊಮ್ಮೆ ಕಣ್ಣಿಗೆ ಸ್ವಲ್ಪ ವಿಶ್ರಾಂತಿ, ಧೂಮಪಾನ ತ್ಯಜಿಸುವುದು, ಸೂಕ್ತ ಕಣ್ಣಿನ ಸುರಕ್ಷಾ ಕ್ರಮಗಳನ್ನು ಅಳವಡಿಸಿಕೊಳ್ಳುವುದು, ವಿಟಾಮಿನ್-ಎ ಸೇವನೆ, ಕಣ್ಣಿನ ಸ್ವಚ್ಛತೆ ಕಾಪಾಡುವುದು ಸೇರಿದಂತೆ ಮುಂತಾದ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದು ಅನೇಕ ಸಲಹೆ-ಸೂಚನೆಗಳನ್ನು ನೀಡಿದರು. ಉಪನ್ಯಾಸಕ ಎಚ್.ಬಿ.ಪಾಟೀಲ್ ಮಾತನಾಡಿ, ಕಣ್ಣಿನ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲು, ಅದಕ್ಕೆ ಸೂಕ್ತವಾದ ಚಿಕಿತ್ಸೆಯನ್ನು ಪಡೆದುಕೊಳ್ಳುವುದು ಹೇಗೆ ಎಂಬುದರ ಬಗ್ಗೆ ಅರಿವು ಮೂಡಿಸಲು ಹಾಗೂ ಕಣ್ಣು ದಾನದ ಮೂಲಕ ದೃಷ್ಟಿವಿಕಲಚೇತನರ ಜೀವನದಲ್ಲಿ ಭರವಸೆ ಮೂಡಿಸುವುದರ ಜೊತೆಗೆ ಕಣ್ಣಿನ ಆರೋಗ್ಯದ ಮಹತ್ವವನ್ನು ಸಾರಲು ಪ್ರತಿವರ್ಷ ಅಕ್ಟೋ?ಬರ್ ತಿಂಗಳ ಎರಡನೇ ಗುರುವಾರವನ್ನು 'ವಿಶ್ವ ದೃಷ್ಟಿ ದಿನ'ವನ್ನಾಗಿ ಆಚರಿಸಲಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಸಂಸ್ಥೆಯ ಶಿಕ್ಷಕಿಯರಾದ ಪೂಜಾ ಹೂಗಾರ, ಮುಸ್ಕಾನ್ ಶೇಖ್, ಸ್ನೇಹಾ ಚೌಹಾಣ ಹಾಗೂ ವಿದ್ಯಾರ್ಥಿಗಳು ಇದ್ದರು.

# ಅಂಗನವಾಡಿ ನೌಕರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಬೇಕು: ಶಾಂತ ಘಂಟಿ

ಕಲಬುರಗಿ: ಅಂಗನವಾಡಿ ನೌಕರರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ಸರ್ಕಾರ ಕೂಡಲೇ ಪರಿಹರಿಸಿ, ಅವರ ಹಕ್ಕು ಹಾಗೂ ಬೇಡಿಕೆಗಳಿಗೆ ಸ್ಪಂದಿಸಬೇಕು ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ರಾಜ್ಯ ಕಾರ್ಯಾಧ್ಯಕ್ಷೆ ಶಾಂತ ಘಂಟಿ ಹೇಳಿದರು.

ನಗರದ ಕನ್ನಡ ಭವನದಲ್ಲಿ ಬುಧವಾರ ಆಯೋಜಿಸಿದ್ದ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಅಖಿಖಿಗ ಸಂಯೋಜಿತ)ದ 7ನೇ ಕಲಬುರಗಿ ಗ್ರಾಮೀಣ ತಾಲೂಕು ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಮಕ್ಕಳ ಹಾಗೂ ಮಹಿಳೆಯರ ಕಲ್ಯಾಣಕ್ಕಾಗಿ ನಿರಂತರವಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಸೇವೆಯನ್ನು ಸರ್ಕಾರ ಗುರುತಿಸಿ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ಅಂಗನವಾಡಿ ನೌಕರರ ಕೆಲಸದ ಹೊರೆ ಹೆಚ್ಚಾಗುತ್ತಿದ್ದು, ವಿವಿಧ ಇಲಾಖೆಗಳ ಜವಾಬ್ದಾರಿಗಳನ್ನೂ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ಸಮರ್ಪಕ ವೇತನ, ಸಾಮಾಜಿಕ ಭದ್ರತೆ ಸೇರಿದಂತೆ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವ ಮೂಲಕ ಅವರ ಜೀವನಮಟ್ಟ ಸುಧಾರಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಸಮ್ಮೇಳನದಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷೆ ಗೌರಮ್ಮ ಪಾಟೀಲ, ಜಿಲ್ಲಾ ಕಾರ್ಯದರ್ಶಿ ರಾಜಮತಿ ಪಾಟೀಲ, ಅಖಿಖಿಗ ಜಿಲ್ಲಾ ಅಧ್ಯಕ್ಷ ಎಂ.ಬಿ. ಸಜ್ಜನ್, ಜಯಶ್ರೀ ಗೌರ್, ಮಂಜುಳಾ, ಗೋರಿಬಿ, ಗೌರಮ್ಮ ಕಿರಣಗಿ, ವತ್ರಲ್ಲ ಸರಡಗಿ, ಇಂದುಮತಿ, ಶರಣಮ್ಮ ಗಂಗೂ, ರೇಷ್ಮಾ ಕಮಲಾಪುರ ಸೇರಿದಂತೆ ಹಲವರು ಭಾಗವಹಿಸಿದ್ದರು.

ಅಂಗನವಾಡಿ ನೌಕರರ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದು, ನೌಕರರ ಸಮಸ್ಯೆಗಳಿಗೆ ಒಗ್ಗಟ್ಟಿನಿಂದ ಧ್ವನಿ ಎತ್ತುವುದು ಹಾಗೂ ಹಕ್ಕುಗಳಿಗಾಗಿ ನಿರಂತರ ಹೋರಾಟ ನಡೆಸುವ ಕುರಿತು ಸಮ್ಮೇಳನದಲ್ಲಿ ಚರ್ಚಿಸಲಾಯಿತು. ತಾಲೂಕು ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಭಾಷಾ ಸೌಹಾರ್ದಕ್ಕೆ ಡಾ. ಲಕ್ಷ್ಮಣ ಭೋಸಲೆ ಕರೆ

ಕಲಬುರಗಿ: ಹಿಂದಿ ಭಾಷೆಯ ಮಹತ್ವ, ಭಾರತೀಯ ಭಾಷಾ ವೈವಿಧ್ಯದಲ್ಲಿ ಹಿಂದಿ ಭಾಷೆಯ ಸ್ಥಾನ ವಿಶೇಷವಾಗಿದೆ. ಎಲ್ಲ ಭಾಷೆಗಳ ನಡುವಿನ ಸೌಹಾರ್ದತೆಗೆ ಹಿಂದಿ ಸಾಕ್ಷಿಯಾಗಿದೆ ಎಂದು ಲಕ್ಷ್ಮಣ ಭೋಸಲೆಯವರು ಹೇಳಿದರು. ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದಲ್ಲಿ ಬುಧವಾರರಂದು ಹಿಂದಿ ವಿಭಾಗದ ವತಿಯಿಂದ ಹಿಂದಿ ದಿವಸ ಕಾರ್ಯಕ್ರಮದಲ್ಲಿ ಮುಖ್ಯ ಉಪನ್ಯಾಸಕರಾಗಿ ಆಗಮಿಸಿದ್ದ ಕಮಲಾಪುರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಲಕ್ಷ್ಮಣ ಭೋಸಲೆ ಅವರು ಮಾತನಾಡುತ್ತಾ ಭಾಷೆ ಕೇವಲ ಸಂವಹನದ ಸಾಧನವಲ್ಲ; ಅದು ಒಂದು ಸಮಾಜದ ಸಂಸ್ಕೃತಿ, ಚಿಂತನೆ ಮತ್ತು ಭಾವಲೋಕವನ್ನು ಪ್ರತಿಬಿಂಬಿಸುವ ಶಕ್ತಿಯುತ ಮಾಧ್ಯಮವಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಮಲ್ಲಿನಾಥ ಎಸ್. ತಳವಾರ ಅವರು ಮಾತನಾಡಿ, ಭಾರತೀಯ ಭಾಷೆಗಳ ನಡುವಿನ ಪರಸ್ಪರ ಗೌರವ ಮತ್ತು ಸೌಹಾರ್ದದ ಅಗತ್ಯವನ್ನು ಪ್ರತಿಪಾದಿಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯರ ಡಾ. ದಯಾನಂದ ಎಂ. ಶಾಸ್ತ್ರಿಯವರು ಅಧ್ಯಕ್ಷತೆವಹಿಸಿ ಹಿಂದಿ ಭಾಷೆಯ ಇತಿಹಾಸ, ಬೆಳವಣಿಗೆ, ಸಾಹಿತ್ಯಿಕ ಶ್ರೀಮಂತಿಕೆ ಹಾಗೂ ರಾಷ್ಟ್ರಮಟ್ಟದ ಸಂವಹನದಲ್ಲಿ ಅದರ ಪಾತ್ರದ ಕುರಿತು ಮಾತನಾಡಿದರು.

ವೇದಿಕೆಯಲ್ಲಿ ಹಿಂದಿ ವಿಭಾಗದ ಪ್ರಾಧ್ಯಾಪಕಿ ಡಾ. ರೋಹಿಣಿ ಸಿಂಧೆಯವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿನಿ ಆಲ್ಫಿಯಾ ನಿರೂಪಿಸಿದರು. ವಿದ್ಯಾರ್ಥಿ ಹಾಜಿ ವಂದನೆ ಸಲ್ಲಿಸಿದರು.

# ಸಾಹಿತಿ,ವಿಮರ್ಶಕ ಆತ್ಮವಿಮರ್ಶೆಯೊಂದಿಗೆ ಸಮಾಜದ ಆಗುಹೋಗು ವಿಮರ್ಶಿಸಬೇಕು

ಕಲಬುರಗಿ: ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ (ಸಿಯುಕೆ) ಕನ್ನಡ ವಿಭಾಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕರ್ನಾಟಕ ಸಾಹಿತ್ಯ ಅಕಾಡೆಮಿ ಸಹಯೋಗದಲ್ಲಿ ಆಯೋಜಿಸಿದ್ದ 'ಕನ್ನಡ ವಿಮರ್ಶೆಯ ತಾತ್ವೀಕರಣ' ವಿಷಯದ ಮೂರು ದಿನಗಳ ಕಮ್ಮಟವನ್ನು ಸಿಯುಕೆಯ ಕನ್ನಡ ವಿಭಾಗದ ಸಭಾಂಗಣದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್.ಮುಕುಂದರಾಜ್ ಹಾಗೂ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಉದ್ಘಾಟಿಸಿದರು.

ನಂತರ ಮಾತನಾಡಿದ ಎಲ್.ಎನ್.ಮುಕುಂದರಾಜ್ ಅವರು ಕನ್ನಡ ಸಾಹಿತ್ಯವನ್ನು ಗಂಭೀರವಾಗಿ ಪರಿಗಣಿಸುವುದರ ಜೊತೆಗೆ ಸಾಹಿತಿಗಳು ಮತ್ತು ವಿಮರ್ಶಕರು ತಮ್ಮ ಆತ್ಮವಿಮರ್ಶೆಯೊಂದಿಗೆ ಸಮಾಜದ ಆಗುಹೋಗುಗಳನ್ನೂ ವಿಮರ್ಶಿಸಬೇಕು ಎಂದು ಅವರು ಹೇಳಿದರು.

ಪ್ರಸ್ತುತ ಸಂದರ್ಭದಲ್ಲಿ ಕನ್ನಡ ಸಾಹಿತ್ಯದ ಜೊತೆಗೆ ಸಿನಿಮಾ, ರಂಗಭೂಮಿ, ನಾಟಕ, ಪತ್ರಿಕೋದ್ಯಮ ಸೇರಿದಂತೆ ಸಮಾಜದ ವಿವಿಧ ಕ್ಷೇತ್ರಗಳಲ್ಲಿನ ಬೆಳವಣಿಗೆಗಳನ್ನೂ ವಿಮರ್ಶೆಯ ವ್ಯಾಪ್ತಿಗೆ ತರಬೇಕಾಗಿದೆ. ಅನೇಕ ಯುವ ಸಾಹಿತಿಗಳು ತಮ್ಮ ಬರವಣಿಗೆಯ ಮೂಲಕ ಸಮಾಜಮುಖಿ ಕಾರ್ಯ ಮಾಡುತ್ತಿದ್ದಾರೆ. ಅಂತಹ ಬರಹಗಾರರನ್ನು ಪ್ರೋತ್ಸಾಹಿಸುವ ಅಗತ್ಯವಿದೆ ಎಂದರು.

ಸಂಕಷ್ಟದ ಪರಿಸ್ಥಿತಿಗಳಲ್ಲಿಯೂ ವಿಮರ್ಶಕರು ಮತ್ತು ಸಾಹಿತ್ಯಕಾರರು ಸತ್ಯವನ್ನು ಹೇಳುವ ಧೈರ್ಯ ಹೊಂದಿರಬೇಕು. ಮೌನಕ್ಕೆ ಶರಣಾಗುವುದು ಆತ್ಮಾಹುತಿಗೆ ಸಮಾನ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು, ಯಾವುದೇ ಭಾಷೆಯನ್ನು ಪ್ರೀತಿಸಬೇಕು ಹಾಗು ಗೌರವಿಸಬೇಕು. ಕೇಂದ್ರ ಸರ್ಕಾರದ ರಾಷ್ಟ್ರೀಯ ಶಿಕ್ಷಣ ನೀತಿ-2020ರ ಆಶಯದಂತೆ ತಮ್ಮ ತಮ್ಮ ಪ್ರಾದೇಶಿಕ ಭಾಷೆಯಲ್ಲಿಯೇ ಶಿಕ್ಷಣವನ್ನು ನೀಡುವುದರಿಂದ ವಿದ್ಯಾರ್ಥಿಗಳು ವಿಷಯಗಳನ್ನು,



ವಿಶೇಷವಾಗಿ ಮಾಹಿತಿ ತಂತ್ರಜ್ಞಾನಕ್ಕೆ ಸಂಬಂಧಿಸಿದ ಜ್ಞಾನವನ್ನು ಸುಲಭವಾಗಿ ಗ್ರಹಿಸಲು ಸಾಧ್ಯವಾಗುತ್ತದೆ ಎಂದರು.

ಮುಂದುವರಿದ ಜಪಾನ್, ಜರ್ಮನಿ ಸೇರಿದಂತೆ ಹಲವು ದೇಶಗಳಲ್ಲಿ ತಮ್ಮ ಸ್ಥಳೀಯ ಭಾಷೆಯಲ್ಲಿಯೇ ಶಿಕ್ಷಣ ನೀಡಲಾಗುತ್ತಿದೆ. ನಮ್ಮ ಕನ್ನಡದ ಮಹಾನ್ ಕವಿಗಳಾದ ರನ್ನ, ಪಂಪ, ಪೊನ್ನ ಮೊದಲಾದ ಮಹನೀಯರ ಸಾಹಿತ್ಯ ಮತ್ತು ಕೃತಿಗಳ ಸತ್ವವನ್ನು ಇಂದಿನ ಪೀಳಿಗೆ ಅರಿತುಕೊಳ್ಳಬೇಕಾಗಿದೆ. ಕನ್ನಡವು ಶಾಸ್ತ್ರೀಯ ಹಾಗೂ ಪ್ರಾಚೀನ ಭಾಷೆಯಾಗಿದ್ದು, ಕನ್ನಡದ ಸಾಹಿತ್ಯ ಮತ್ತು ಪರಂಪರೆಯನ್ನು ಇತರ ಭಾಷೆಗಳಿಗೆ ಅನುವಾದಿಸುವುದರ ಜೊತೆಗೆ ಇಂದಿನ ವಿದ್ಯಾರ್ಥಿಗಳು ಕನ್ನಡ ಸಾಹಿತ್ಯವನ್ನು ಮತ್ತಷ್ಟು ಆಳವಾಗಿ ಅಧ್ಯಯನ ಮಾಡಬೇಕು ಎಂದು ಹೇಳಿದರು.

ಕಮ್ಮಟದ ಕುರಿತು ಮೈಸೂರಿನ ಭಾರತೀಯ ಭಾಷಾ ಸಂಸ್ಥಾನದ ನಿರ್ದೇಶಕರಾದ ಪ್ರೊ. ಬಸವರಾಜ ಎಂ. ಕೋಡಗುಂಟಿ ಅವರು ಮತ್ತು ಹೊಸಕೋಟೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ರಾಮಲಿಂಗಪ್ಪ ಟಿ. ಬೇಗೂರು ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಕನ್ನಡ ವಿಮರ್ಶೆ ಮತ್ತು ತಾತ್ವೀಕರಣ ಕುರಿತು ಸಿಯುಕೆಯ ಮಾನವಿಕ ಮತ್ತು ಭಾಷಾ ನಿಕಾಯದ ಡೀನ್ ಪ್ರೊ. ಗಣೇಶ್ ಪವಾರ್ ಮಾತನಾಡಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯ-ಸಂಚಾಲಕರಾದ ಸಿದ್ಧರಾಮ ಹೊನ್ಕಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿಯುಕೆ ಕನ್ನಡ ವಿಭಾಗದ ಮುಖ್ಯಸ್ಥರಾದ ಪ್ರೊ. ಶಿವಗಂಗಾ ರಮ್ಮಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಮ್ಮಟದ ಮೊದಲ ದಿನ ವಿ.ಬಿ. ತಾರಕೇಶ್ವರ ಅವರು 'ಅನುವಾದ ಕೃತಿಗಳಲ್ಲಿನ ಕನ್ನಡ ವಿಮರ್ಶೆಯ ಪರಿಕಲ್ಪನೀಕರಣ, ಕನ್ನಡ ಸಾಹಿತ್ಯ ಚರಿತ್ರೆ ಕುರಿತು ಡಾ. ರಾಮಲಿಂಗಪ್ಪ ಟಿ. ಬೇಗೂರು ಹಾಗೂ ಪದ್ಮಪ್ರಸಾದ ಅವರು ಅವರು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಕನ್ನಡ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ವಿಕ್ರಮ ವಿಸಾಜಿ, ಡಾ. ಅಪ್ಪಗೆರೆ ಸೋಮಶೇಖರ, ಡಾ. ಟಿ.ಡಿ ರಾಜಣ್ಣ, ಡಾ. ರೋಹಿಣಾಕ್ಷ ಶಿರ್ಲಾಲು ಸೇರಿದಂತೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರು, ಸಿಯುಕೆಯ ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು, ಸಂಪನ್ಮೂಲ ವ್ಯಕ್ತಿಗಳು ಹಾಗೂ ರಾಜ್ಯದ ವಿವಿಧ ಭಾಗಗಳ ಪ್ರತಿನಿಧಿಗಳು ಆನ್‌ಲೈನ್ ಮತ್ತು ಆನಲೈನ್ ಮೂಲಕ ಭಾಗವಹಿಸಿದ್ದರು. ಇಂದಿನಿಂದ ಆರಂಭವಾದ ಕಮ್ಮಟವು ಮೂರು ದಿನಗಳ ಕಾಲ ವಿವಿಧ ಗೋಷ್ಠಿಗಳು, ಸಂವಾದಗಳು ನಡೆಯಲಿವೆ.

# ಕಲಬುರಗಿ : ಇಂದಿನ ಯುವಜನತೆ ದೇಶದ ಭವಿಷ್ಯ

ಕಲಬುರಗಿ : ಯುವಕರಲ್ಲಿ ಜ್ಞಾನ, ಶಕ್ತಿ ಮತ್ತು ಸೃಜನಶೀಲತೆ ಇದೆ. ಈ ಶಕ್ತಿಯನ್ನು ಸಮಾಜದ ಅಭಿವೃದ್ಧಿಗಾಗಿ ಬಳಸಿದಾಗ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ಶರಣಬಸವೇಶ್ವರ ವಾಣಿಜ್ಯ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ.ದಯಾನಂದ ಹೊಡಲ್ ಅಭಿಪ್ರಾಯಪಟ್ಟರು.

ನಗರದ ಗೋದುತಾಯಿ ದೊಡ್ಡಪ್ಪ ಅಪ್ಪ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಮಹಾವಿದ್ಯಾಲಯದಲ್ಲಿ ಬುಧವಾರ ಎನ್‌ಎಸ್‌ಎಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಪನ್ಮೂಲವ್ಯಕ್ತಿಯಾಗಿ ಮಾತನಾಡಿ, ಮಹಾತ್ಮ ಗಾಂಧೀಜಿಯವರ ಕನಸಿನಂತೆ ಅವರ ಜನ್ಮ ಶತಮಾನೋತ್ಸವದ ವರ್ಷ 1969ರ ಸೆಪ್ಟೆಂಬರ 24 ರಂದು ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಸ್ಥಾಪನೆಯಾಯಿತು. 'ನಾನಲ್ಲ ನೀನು' ಎಂಬ ಧ್ಯೇಯವಾಕ್ಯವಾಗಿದ್ದು, ಸ್ವಾರ್ಥಕ್ಕಿಂತ ಸಮಾಜದ ಹಿತವನ್ನು ಮುಂದಿಟ್ಟುಕೊಂಡು, ಸಮಾಜದ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಅವುಗಳ ಪರಿಹಾರಕ್ಕೆ ಕೈ ಜೋಡಿಸುವ ಮನೋಭಾವವನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವುದು ಎನ್‌ಎಸ್‌ಎಸ್ ನ ಪ್ರಮುಖ ಉದ್ದೇಶವಾಗಿದೆ. ಶಿಸ್ತು, ನಾಯಕತ್ವ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವುದು ಇದರ ಮುಖ್ಯ ಆಶಯವಾಗಿದೆ. ಯುವ ಜನತೆ ದೇಶದ ಆಸ್ತಿ, ಅದರಲ್ಲೂ ಹೆಣ್ಣು ಮಕ್ಕಳು ಪ್ರತಿಯೊಂದು ಕ್ಷೇತ್ರದಲ್ಲೂ ಮುಂಚೂಣಿಯಲ್ಲಿದ್ದಾಳೆ, ಅದಕ್ಕಾಗಿ ವಿದ್ಯಾರ್ಥಿಗಳಿಂದ



ದೇಶ ಕಟ್ಟುವ ಕೆಲಸವಾಗಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶರಣಬಸವೇಶ್ವರ ದೇವಸ್ಥಾನ ಆವರಣದ ಶಾಲಾ-ಕಾಲೇಜುಗಳ ನಿರ್ದೇಶಕಿ ಡಾ.ನೀಲಾಂಬಿಕಾ ಶೇರಿಕಾರ ಮಾತನಾಡಿ, ಎನ್‌ಎನ್‌ಎಸ್ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ಮಾಡುವ ದೊಡ್ಡ ವೇದಿಕೆಯಾಗಿದೆ. ಇಂದಿನ ಯುವಜನತೆ ದೇಶದ ದೊಡ್ಡ ಶಕ್ತಿಯಾಗಿದೆ. ಯುವಕರಲ್ಲಿ ಜ್ಞಾನ, ಕೌಶಲ್ಯ, ಶಿಸ್ತು ಮತ್ತು ಸೇವಾ ಮನೋಭಾವ ಬೆಳೆದರೆ ದೇಶದ ಅಭಿವೃದ್ಧಿ ಇನ್ನಷ್ಟು ವೇಗವಾಗಿ ಸಾಧ್ಯವಾಗುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನೂ ನಿರ್ವಹಿಸಬೇಕು ಎಂದು ತಿಳಿಸಿದರು.



## ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರಗೆ ರೈತಸಂಘ ಮನವಿ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಕಬ್ಬಿಗೆ ಬೆಂಬಲ ಬೆಲೆ ನಿಗದಿ, ಗೋಶಾಲೆ, ಮೇವು ಬ್ಯಾಂಕ್ ಆರಂಭಕ್ಕೆ ಸರ್ಕಾರದ ಮೇಲೆ ಒತ್ತಡ ಹಾಕಲು ಆಗ್ರಹಿಸಿ ರಾಜ್ಯ ರೈತಸಂಘ ಹಾಗೂ ಹಸಿರುಸೇನೆಯ ಪದಾಧಿಕಾರಿಗಳು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರರವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಮೂಲಕ ಸಿಂದಗಿಗೆ ತೆರಳುವ ಸಂದರ್ಭದಲ್ಲಿ ಶುಕ್ರವಾರ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಬಿಜೆಪಿ ಅಧ್ಯಕ್ಷ ವಿಜಯೇಂದ್ರರನ್ನು ಕಂಡು ಮನವಿ ಸಲ್ಲಿಸಿದರು. ಮನವಿ ಸ್ವೀಕರಿಸಿದ ಅಧ್ಯಕ್ಷ ಸ್ಪಂದಿಸುವ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಬಿಜೆಪಿ ಪದಾಧಿಕಾ–ರಿಗಳು, ಅಭಿಮಾನಿಗಳು ಪಕ್ಷದ ರಾಜ್ಯಾಧ್ಯಕ್ಷ–ರಿಗೆ ಹೆದ್ದಾರಿಯಲ್ಲಿಯೇ ಸನ್ಮಾನಿಸಿದರು. ಸಿಂದಗಿ ಕಾರ್ಯಕ್ರಮಕ್ಕೆ ವಿಳಂಬ ನೆಪದ ಕಾರಣ ಹೇಳಿ ಪಕ್ಷದ ಯಾವುದೇ ಕಾರ್ಯಕರ್ತರನ್ನು ಮಾತನಾಡಿಸದೇ ಹೊರಟ ಅಧ್ಯಕ್ಷರ ವರ್ತನೆಗೆ ಹಲವರು ಬೇಸರ, ಅಸಮಾಧಾನ ವ್ಯಕ್ತಪಡಿಸಿದರು. ಸಂಸದ ರಮೇಶ ಜಿಗಜಿಣಗಿ, ಮಾಜಿ ಶಾಸಕರುಗಳಾದ ಸೋಮನಗೌಡ ಪಾಟೀಲ(ಸಾಸನೂರ), ಎ. ಎಸ್.ಪಾಟೀಲ(ನಡಹಳ್ಳಿ), ಜಿಲ್ಲಾ ಅಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಉಪಾಧ್ಯಕ್ಷ ಪ್ರಭುಗೌಡ ಬಿರಾದಾರ(ಅಸ್ಕಿ), ಕಾರ್ಯದರ್ಶಿ ರಮೇಶ ಮಸಬಿನಾಳ, ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಸಿದ್ದು ಬುಳ್ಳಾ, ಧುರೀಣ ಬಸನಗೌಡ ಪಾಟೀಲ(ಯಡಿಯಾಪೂರ) ಮಂಡಲ ಅಧ್ಯಕ್ಷ ಅವ್ವಣ್ಣ ಗ್ವಾತಗಿ, ಗಾಯತ್ರಿ ದೇವೂರ, ಶಿಲ್ಪಾ ಕುದರಗೊಂಡ, ಸೋಮಶೇಖರ ಹಿರೇಮಠ, ಸಂಪತ್ ಜಮಾದಾರ, ಸಿದ್ದು ಪಾಟೀಲ(ಜಾಲವಾದ),ಸಿದ್ರಾಮಯ್ಯ ಮಠ(ಸಾತಿಹಾಳ), ಮಹಾಂತೇಶ ಬಿರಾದಾರ , ಶ್ರೀಮಂತ ತಳವಾರ, ಸೇರಿದಂತೆ ಜಿಲ್ಲೆ ಹಾಗೂ ಮತಕ್ಷೇತ್ರದ ಪ್ರಮುಖರು ಇದ್ದರು.

### ವಿಜಯಪುರದಲ್ಲಿ ಪೌರಕಾರ್ಮಿಕರಿಗೆ ಸನ್ಮಾನ ನೆರವೇರಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಭಿಮತ

## ಪೌರಕಾರ್ಮಿಕರು ಸ್ವಚ್ಛತೆಯ ರಾಯಭಾರಿಗಳು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಪ್ರತಿನಿತ್ಯ ಮಳೆ, ಚಳಿ ಎನ್ನದೇ ಸ್ವಚ್ಛತೆಯ ಮೂಲಕ ನಗರವನ್ನು ಸ್ವಚ್ಛಗೊಳಿಸಿ ಪ್ರತಿಯೊಬ್ಬರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಮಹತ್ವದ ಪಾತ್ರ ವಹಿಸುವ ಪೌರಕಾರ್ಮಿಕರಿಗೆ ಭಾರತೀಯ ಜನತಾ ಪಕ್ಷದ ನಗರ ಘಟಕದ ನೇತೃತ್ವದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಗೌರವಪೂರ್ವಕ ಸನ್ಮಾನ ನೇರವೇರಿಸಿ ಉಡುಗೊರೆ ನೀಡಿ ಅವರ ಕೊಡುಗೆಗೆ ಧನ್ಯತಾ ನುಡಿಗಳನ್ನು ಅರ್ಪಿಸಿದರು.

ನಗರದ ಸಾಯಿ ಗಾರ್ಡ್ನ್ ಸಭಾಂಗಣದಲ್ಲಿ 750 ಕ್ಕೂ ಹೆಚ್ಚು ಪೌರಕಾರ್ಮಿಕರಿಗೆ ವಿಶೇಷ ಉಡುಗೊರೆ ನೀಡಿ ಅವರನ್ನು ಸನ್ಮಾನಿಸಿ ಅವರ ಮೇಲೆ ಪುಷ್ಪವೃಷ್ಟಿಗೈದು ಅವರ ಕಾರ್ಯಕ್ಕೆ ಧನ್ಯವಾದ ಅರ್ಪಿಸಲಾಯಿತು.

ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ಇಂದು ನಮ್ಮ ನಾಡು ಸ್ವಚ್ಛವಾಗಿರಲು ಪೌರಕಾರ್ಮಿಕ ಬಂಧುಗಳ ಶ್ರಮವೇ ಕಾರಣ, ಪೌರಕಾರ್ಮಿಕರು ಸ್ವಚ್ಛತೆಯ ರಾಯಭಾರಿಗಳು, ಪೌರಕಾರ್ಮಿಕರ ಬಗ್ಗೆ ಬಿಜೆಪಿ ಯಾವತ್ತೂ ಆಳವಾದ ಗೌರವ ಹಾಗೂ ಶ್ರದ್ಧೆ ಹಾಗೂ ಕಾಳಜಿ ಹೊಂದಿದೆ, ಬಿ.ಎಸ್. ಯಡಿಯೂರಪ್ಪ ಅವರು ಕೋವಿಡ್ ಸಂದರ್ಭದಲ್ಲಿ ಪೌರಕಾರ್ಮಿಕ ಬಂಧುಗಳಿಗಾಗಿಯೇ ಅಭಯ ನೀಡುವ ಅನೇಕ ಕಾರ್ಯಕ್ರಮಗಳನ್ನು ರೂಪಿಸಿದ್ದರು, ನಂತರ ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದಾಗ ಅನೇಕ ವರ್ಷಗಳಿಂದ ಆಗದೇ ಇದ್ದ 5 ಸಾವಿರಕ್ಕೂ ಅಧಿಕ ಪೌರಕಾರ್ಮಿಕರ ಸೇವೆಯನ್ನು ಖಾಯಂಗೊಳಿಸಲಾಯಿತು, ಇದು ಪೌರಕಾರ್ಮಿಕರಿಗೆ ಸಂಬಂಧಿಸಿದಂತೆ ನಮ್ಮ ಪಕ್ಷಕ್ಕೆ ಇರುವ ಕಾಳಜಿ ಹಾಗೂ ಬದ್ಧತೆ ಎಂದರು. ಪ್ರಧಾನಿ ನರೇಂದ್ರ ಮೋದಿ ಅವರಂತೂ ಪೌರಕಾರ್ಮಿಕರನ್ನು ಶ್ರದ್ಧೆಯಿಂದ ಕಾಣುವ ರೀತಿ ಪ್ರತಿಯೊಬ್ಬರಿಗೂ ಮಾದರಿ, ಪೌರಕಾರ್ಮಿಕ ಬಂಧುಗಳ ಪಾದಪೂಜೆ ನೇರವೇರಿಸುವ ಮೂಲಕ ಪೌರಕಾರ್ಮಿಕರ ಕರ್ತವ್ಯಕ್ಕೆ ಗೌರವವನ್ನು ನೀಡುವ ಕಾರ್ಯವನ್ನು ಪ್ರಧಾನಿ ಮೋದಿಜಿ ಮಾಡಿದ್ದಾರೆ, ಅವರ ಆದ–'ರ್ಶದ ಬೆಳಕಿನಲ್ಲಿ ಸಾಗಿ ನಾವು ಪೌರಕಾರ್ಮಿಕರನ್ನು ಅತ್ಯಂತ ಗೌರವದಿಂದ ಕಾಣಬೇಕು, ಪೌರಕಾರ್ಮಿಕರು ತಮ್ಮ ಮಕ್ಕಳನ್ನು ಶಿಕ್ಷಣವಂತರಾಗಿಸಬೇಕು, ಅವರು ಉನ್ನತ ಹುದ್ದೆ ಅಲಂಕ–ರಿಸುವ ನಿಟ್ಟಿನಲ್ಲಿ ಶಿಕ್ಷಣವೇ ಆಧಾರ, ಹೀಗಾಗಿ ಈ ವಿಷಯಕ್ಕೆ ಹೆಚ್ಚಿನ ಗಮನ ಹರಿಸಿ ಎಂದರು.

ಪೌರಕಾರ್ಮಿಕರ ಸನ್ಮಾನ ಎಂದರೆ ಹತ್ತು–ಹದಿನೈದು ಜನರಿಗೆ ಇರಬಹುದು ಎಂದೇ ಭಾವಿಸಿದ್ದೆ, ಆದರೆ 750 ಕ್ಕೂ ಹೆಚ್ಚು ಪೌರಕಾರ್ಮಿಕರಿಗೆ ಏಕಕಾಲಕ್ಕೆ ಸನ್ಮಾನ ಮಾಡುತ್ತಿರುವುದು ಒಂದು ಅದ್ಭುತ ಕಾರ್ಯವೇ ಸರಿ, ಈ ಕಾರ್ಯಕ್ರಮದ ರೂವಾರಿಯಾಗಿರುವ ಉಮೇಶ ಕಾರಜೋಳರಿಗೆ ವಿಶೇಷ ಧನ್ಯವಾದ ಅರ್ಪಿಸುವೆ ಎಂದರು.

ಈ ವಿಶೇಷ ಕಾರ್ಯಕ್ರಮವನ್ನು ಬಿಜೆಪಿ ಎಸ್.ಸಿ. ಮೋರ್ಚಾ ರಾಜ್ಯ ಉಪಾಧ್ಯಕ್ಷ ಉಮೇಶ ಕಾರಜೋಳ ಅವರ ಸಾರಥ್ಯದಲ್ಲಿ ಸಂಘಟಿಸಲಾಗಿತ್ತು. ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಮೇಯರ್ ಎಂ.ಎಸ್. ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಉಪಮೇಯರ್ ಸುಮಿತ್ರಾ ಜಾಧವ, ಬಿಜೆಪಿ ನಗರ ಘಟಕದ ಅಧ್ಯಕ್ಷ ಸಂದೀಪ ಪಾಟೀಲ, ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪೂರ, ಬೆಳಗಾವಿ ವಿಭಾಗ ಸಹ ಪ್ರಭಾ–ರಿಗಳಾದ ಬಸವರಾಜ ಯಂಕಂಚಿ, ವಿಜುಗೌಡ ಪಾಟೀಲ, ಚಂದ್ರಶೇಖರ ಕವಟಗಿ, ಡಾ.ಸುರೇಶ ಬಿರಾದಾರ, ನವೀನ ಅರಕೇರಿ, ಪರಶುರಾಮಸಿಂಗ್ ರಜಪೂತ ಸೇರಿದಂತೆ ಹಲವರಿದ್ದರು.



## ವಿಜಯಪುರ ಜಿಲ್ಲೆಗೆ 371(ಜೆ) ಮೀಸಲಾತಿಗೆ ಆಗ್ರಹಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ

**ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅವರಿಗೆ ಹೋರಾಟ ಸಮಿತಿಯಿಂದ ಮನವಿ**

ವಿಜಯಪುರ :ವಿಜಯಪುರ ಜಿಲ್ಲಾ 371(ಜೆ ) ಹೋರಾಟ ಸಮಿತಿ ಮುಖಂಡರು ವಿಜಯಪುರ ಜಿಲ್ಲೆಗೆ 371(ಜೆ) ಮೀಸಲಾತಿಗೆ ಆಗ್ರಹಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅವರಿಗೆ ಮನವಿ ಸಲ್ಲಿಸಿದರು.

371(ಜೆ ) ಮೀಸಲಾತಿಯಿಂದ ವಿಜಯಪುರ ಜಿಲ್ಲೆಯನ್ನು ಕೈ ಬಿಟ್ಟಿದ್ದರಿಂದ ಜಿಲ್ಲೆಯ ಜನ–ರಿಗೆ ದೊಡ್ಡ ಅನ್ಯಾಯವಾಗಿದೆ. ವಿಜಯಪುರ ಜಿಲ್ಲೆಗೆ ಮೀಸಲಾತಿ ಕಲ್ಪಿಸಲು ಮುಖ್ಯಮಂತ್ರಿಗಳ ಗಮನಕ್ಕೆ ತಂದು ರಾಜ್ಯ ಸರಕಾರದಿಂದ ಕೇಂದ್ರಕ್ಕೆ ಪ್ರಸ್ತಾವನೆ ಕಳುಹಿಸಿಕೊಡಬೇಕು ಹಾಗೂ ಪ್ರಧಾನಮಂತ್ರಿಯವರ ಗಮನಕ್ಕೆ ತಂದು ಕೇಂದ್ರ ಸರಕಾರದಿಂದ ಸಂವಿಧಾನದ 371(ಜೆ ) ಗೆ ತಿದ್ದುಪಡಿ ಮಾಡಿ ವಿಜಯಪುರ ಜಿಲ್ಲೆಗೆ ಮೀಸಲಾತಿ ಕಲ್ಪಿಸಬೇಕೆಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಕಳೆದ 2010ರಿಂದ ಮೀಸಲಾತಿಗೆ ಆಗ್ರಹಿಸಿ ಹೋರಾಟ ನಡೆಯುತ್ತಿದೆ.ವಿಜಯಪುರ ಜಿಲ್ಲಾ 371(ಜೆ ) ಹೋರಾಟ ಸಮಿತಿ ಜಿಲ್ಲೆಯಲ್ಲಿ ಮೀಸಲಾತಿಗಾಗಿ ನಿರಂತರ ಹೋರಾಟ ಮಾಡುತ್ತಿದೆ ಎಂದು ಹೋರಾಟ ಸಮಿತಿ ಮುಖಂಡರು ಅಧ್ಯಕ್ಷರ ಗಮನಕ್ಕೆ ತಂದು ನ್ಯಾಯಯುತ ಹೋರಾಟ ಬೆಂಬಲಿಸುವಂತೆ ಮನವಿ ಮಾಡಿದರು.

ವಿಜಯಪುರ ಜಿಲ್ಲೆಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸೌಲಭ್ಯ ಯುವಕರಿಗೆ ನೇಮಕಾತಿಯಲ್ಲಿ ಮೀಸಲಾತಿ,ಕಲ್ಯಾಣ ಕರ್ನಾಟಕ ಭಾಗಕ್ಕೆ ಸಿಗುವ ವಿಶೇಷ ಅನುದಾನ ಸೌಲಭ್ಯ ಸೇರಿದಂತೆ ಜಿಲ್ಲೆಯ 25 ಲಕ್ಷ ಜನರ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಸಂವಿಧಾನದ 371(ಜೆ) ಗೆ ತಿದ್ದುಪಡಿ ಮಾಡಿ ವಿಜಯಪುರ ಜಿಲ್ಲೆಯನ್ನು ಮೀಸಲಾತಿಯಡಿ ಸೇರಿಸಿ ಜಿಲ್ಲೆಯ ಸಮಸ್ತ ಜನರಿಗೆ ನ್ಯಾಯ ಒದಗಿಸಬೇಕೆಂದು ಹೋರಾಟಗಾರರು ಇದೆ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅವರಿಗೆ ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಬಿ ವೈ ವಿಜಯೇಂದ್ರ ಅವರು ಹೋರಾಟ ಸಮಿತಿ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿ ಹೋರಾಟ ಸಮಿತಿ ಹಾಗೂ ಜಿಲ್ಲೆಯ ಸಮಸ್ತ ಜನರ ನ್ಯಾಯಯುತ ಬೇಡಿಕೆಯನ್ನು ಸರಕಾರದ ಗಮನಕ್ಕೆ ತಂದು ವಿಜಯಪುರ ಜಿಲ್ಲೆಗೆ 371(ಜೆ) ಮೀಸಲಾತಿ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಬಿಜೆಪಿ ಅಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಮುಖಂಡರಾದ ಸುರೇಶ ಬಿರಾದಾರ, ಮಾಜಿ ಶಾಸಕ ಸೋಮನಗೌಡ ಪಾಟೀಲ ಸಾಸನೂರ, ಈರಣ್ಣ ರಾವೂರ, 371(ಜೆ ) ಹೋರಾಟ ಸಮಿತಿಯ ಮುಖಂಡರಾದ ವಿನೋದ ಖೇಡ, ಲಾಯಪ್ಪ ಇಂಗಳೆ, ನ್ಯಾಯವಾದಿ ಎನ್ ಸುರೇಶಕುಮಾರ, ಅನಿಲ ಇಕ್ಕಡೆ, ಮಹಾದೇವಪ್ಪ ತೇಲಿ ಅರುಣಕುಮಾರ ತೇರದಾಳ, ಸಾಗರ ಸಾವಳಗಿ ಉಪಸ್ಥಿತರಿದ್ದರು.

## ಅ.11ರಂದು ಸಾಂಯವ್ವ ಶ್ರೀಕಾಂತ ಫೌಂಡೇಶನ್ ಉದ್ಘಾಟನೆ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ನಗರದ ಖೋತ ಸಭಾ ಭವನದಲ್ಲಿ ಭಾನುವಾರ ದಿ 11.10.2026 ರಂದು ಬೆಳಗ್ಗೆ 11 ಗಂಟೆಗೆ ಶ್ರೀಮತಿ ಸಾಂಯವ್ವ ಶ್ರೀಕಾಂತ ಫೌಂಡೇಶನ್ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಫೌಂಡೇಶನ್ ಅಧ್ಯಕ್ಷ ರವಿ ಕಾಂಬಳೆ ತಿಳಿಸಿದ್ದಾರೆ.

ಅವರು ಪಟ್ಟಣದ ಡಿಎಸ್ ಕಚೇರಿಯಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ ಮಾಹಿತಿ ನೀಡಿದರು.

ಈ ಕಾರ್ಯಕ್ರಮದಲ್ಲಿ ಉದ್ಘಾಟಕರಾಗಿ ಸಹಕಾರ ಸಚಿವರು ಹಾಗೂ ಶಾಸಕ ಲಕ್ಷ್ಮಣ ಸವದಿ ಹಾಗೂ ಹುಬ್ಬಳ್ಳಿ ವಾ.ಕ.ಸಾ.ಸಂ. ಅಧ್ಯಕ್ಷರು ಮತ್ತು ಕಾಗವಾಡ ಶಾಸಕರಾದ ರಾಜು ಕಾಗೆ ಜ್ಯೋತಿ ಬೆಳಗಿಸುವವರು ಹುಬ್ಬಳ್ಳಿ ವಲಯದ ಆಂತರಿಕ ಭದ್ರತಾ ವಿಭಾಗ ಪೊಲೀಸ್ ಅಧೀಕ್ಷಕರಾದ ರವೀಂದ್ರ ಗಡಾದಿ ಹಾಗೂ ಕರ್ನಾಟಕ ಮಹಾರಾಷ್ಟ್ರದ ಹೆಸರಾಂತ ಉದ್ಯಮಿಗಳು, ಧಮ್ಮ ಭೂಮಿ ಗೂಗವಾಡ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಸಿ.ಆರ್. ಸಾಂಗ್ಲಿಕರ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಬೆಳಗಾವಿ ಜಿಲ್ಲಾ ಸಂಘಟನಾ ಸಂಚಾಲಕರಾದ ಸಂಜಯ ತಳವಲಕರ ವಹಿಸುವರು

ಮುಖ್ಯ ಅತಿಥಿಗಳಾಗಿ ಮಾಜಿ ಸಚಿವರಾದ ಶ್ರೀಮಂತ ಪಾಟೀಲ ಹಾಗೂ ಮಾಜಿ ಶಾಸಕರಾದ ಮಹೇಶ ಕುಮಠಳ್ಳಿ ವಿಶೇಷ ಆಹ್ವಾನಿತರಾಗಿ ಪದ್ಮಶ್ರೀ ಪುರಸ್ಕೃತರಾದ ಡಾ. ಸೀತವ್ವ ಜೋಡಟ್ಟಿ ಅಥಣಿ ಸ್ಥಾಯಿ ಸಮಿತಿ ಅಧ್ಯಕ್ಷರಾದ ದತ್ತಾ ವಾಸ್ಟರ್ ಹಿರಿಯ ನ್ಯಾಯವಾದಿ ಕೆ.ಎನ್. ವನಜೋಳ ಮಕ್ಕಳ ತಜ್ಞರಾದ ಡಾ. ಆನಂದ ಗುಂಜಿಗಾವಿ ರಾವಸಾಬ ಐಹೊಳೆ ಕಾಂಗ್ರೆಸ್ ಮುಖಂಡರಾದ ರಮೇಶ ಶಿಂದಗಿ ಹಲ್ಯಾಳ ಸಕ್ಕರೆ ಕಾರ್ಖಾನೆ ಸದಸ್ಯರಾದ ಘುಳಪ್ಪ ಜತ್ತಿ ಕೆಎಂಸಿ ಆಸ್ಪತ್ರೆಯ ವೈದ್ಯರಾದ ಡಾ. ಕವಿತಾ ಕೊಟ್ರೆ ಡಾ. ಸದಾಶಿವ ಭಜಂತ್ರಿ ಹಾಗೂ ಕೋಮಲ ಕಾಂಬಳೆ ಅವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಘಟನಾ ಸಂಚಾಲಕ ಕುಮಾರ ಬನಸೋಡೆ ಪಾಂಡು ಕಾಂಬಳೆ ದತ್ತು ಕಾಂಬಳೆ ನಿಜಾಮ್ ಮುಲ್ಲಾ ಚಂದು ಬನಸೋಡೆ ರಮೇಶ ತಳಕೇರಿ ಭೀರಪ್ಪ ಕಾಂಬಳೆ ಕಿರಣ ಕಾಂಬಳೆ ಅಮರ ಕಾಂಬಳೆ ಮಹಾಂತೇಶ ಬನಸೋಡೆ ನೀಲಕಂಠ ಕಾಂಬಳೆ ಮಹಾದೇವ ಮಾದರ ಲಕ್ಕಪ್ಪ ಕಾಂಬಳೆ ಅಶೋಕ ನಿಡೋಣಿ ಬಾಬು ಕಾಂಬಳೆ ಹಣಮಂತ ಮೇಲಕೇರಿ ಜಿನ್ನಪ್ಪ ದಾನ್ನೊಳ್ಳಿ ಕಾಡಪ್ಪ ಕಾಂಬಳೆ ರಮೇಶ ಕಾಂಬಳೆ ಸೇರಿದಂತೆ ಇನ್ನಿತರು ಉಪಸ್ಥಿತರಿದ್ದರು.

### ಅಕ್ಟೋಬರನಲ್ಲಿ ನಶಾ ಮುಕ್ತ ಭಾರತ ಅಭಿಯಾನದ ಆರನೇ ವಾರ್ಷಿಕೋತ್ಸವ । ಜಿಲ್ಲಾಧಿಕಾರಿ ಡಾ.ಆನಂದ ಕೆ. ಸೂಚನೆ

## ಮಾದಕ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಜಾಗೃತಿ ಅಭಿಯಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಾದಕ ವಸ್ತುಗಳ ಸೇವನೆಯ ದುಷ್ಪ–ರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಿ, ಯುವಜನತೆಯನ್ನು ವ್ಯಸನದಿಂದ ದೂರವಿಡುವ ಮೂಲಕ ಆರೋಗ್ಯಕರ ಹಾಗೂ ವ್ಯಸನಮುಕ್ತ ಸಮಾಜ ನಿರ್ಮಿಸುವ ಉದ್ದೇಶದಿಂದ ನಶಾ ಮುಕ್ತ ಭಾರತ ಅಭಿಯಾನದ ಆರನೇ ವಾರ್ಷಿಕೋತ್ಸವದ ಅಂಗವಾಗಿ ಅಕ್ಟೋಬರ್ ತಿಂಗಳ ನಾಲ್ಕನೇ ವಾರದಲ್ಲಿ ಜಿಲ್ಲಾದ್ಯಂತ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಈ ಬಗ್ಗೆ ಪ್ರಕಟಣೆ ನೀಡಿರುವ ಅವರು, ಕೇಂದ್ರ ಸರ್ಕಾರದ ನಿರ್ದೇಶನ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಮಾರ್ಗಸೂಚಿಯಂತೆ ಜಿಲ್ಲಾ, ತಾಲ್ಲೂಕು ಹಾಗೂ ಶಿಕ್ಷಣ ಸಂಸ್ಥೆಗಳ ಮಟ್ಟದಲ್ಲಿ ಅಭಿಯಾನವನ್ನು ಪರಿಣಾಮಕಾ–ರಿಯಾಗಿ ಅನುಷ್ಠಾನಗೊಳಿಸಬೇಕು. ಕಾರ್ಯಕ್ರಮಗಳ ಸಮರ್ಪಕ ನಿರ್ವಹಣೆ ಮತ್ತು ಇಲಾಖೆಗಳ ನಡುವಿನ



ಸಮನ್ವಯಕ್ಕಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಿ, ತಮ್ಮ ವ್ಯಾಪ್ತಿಯಲ್ಲಿ ವ್ಯವಸ್ಥಿತವಾಗಿ ಜಾಗೃತಿ ಚಟುವಟಿಕೆಗಳನ್ನು ಹಮ್ಮಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಯುವಜನತೆ ದೇಶದ ಅಮೂಲ್ಯ ಸಂಪತ್ತಾಗಿದ್ದು, ಅವರನ್ನು ಮಾದಕ ವ್ಯಸನದ ದುಷ್ಪರಿಣಾಮಗಳಿಂದ ರಕ್ಷಿಸುವುದು ಸಮಾಜದ ಜವಾಬ್ದಾರಿಯಾಗಿದೆ. ಮಾದಕ ವಸ್ತುಗಳ ಸೇವನೆಯಿಂದ ವ್ಯಕ್ತಿಯ ಆರೋಗ್ಯ, ಕುಟುಂಬದ ನೆಮ್ಮದಿ ಹಾಗೂ ಸಾಮಾಜಿಕ ಜೀವನದ ಮೇಲೆ ಉಂಟಾಗುವ ಗಂಭೀರ ಪರಿಣಾಮಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು. ಯುವಜನರು, ಮಹಿಳೆಯರು ಸೇರಿದಂತೆ ಸಮಾಜದ ಎಲ್ಲ ವರ್ಗದ ಜನರು ವ್ಯಸನಮುಕ್ತ ಸಮಾಜ ನಿರ್ಮಾಣದ ಸಂಕಲ್ಪದೊಂದಿಗೆ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೇರೇಪಿಸಬೇಕು ಎಂದು ಅವರು ಸೂಚಿಸಿದ್ದಾರೆ.

ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕವೂ ಅಭಿಯಾನದಲ್ಲಿ ಭಾಗವಹಿಸಬಹುದಾಗಿದೆ. ಕೇಂದ್ರ ಸರ್ಕಾರದ ಅಧಿಕೃತ ಜಾಲತಾಣವಾದ https://nashmukti.dosje.gov.in/epledge/ಗೆ ಭೇಟಿ ನೀಡಿ ಇ–ಪ್ರತಿಜ್ಞೆ ಸ್ವೀಕರಿಸುವ ಮೂಲಕ ಪ್ರಮಾಣಪತ್ರ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಅಭಿಯಾನದಡಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಅಗತ್ಯವಾದ ಮಾಹಿತಿ ಹಾಗೂ ಮಾರ್ಗಸೂಚಿಗಳನ್ನು https://drive.google.com/drive/folders/1DoDVdfjodDo6tu311Gq-i96Xui163?usp=drive_link ಮೂಲಕ ಪಡೆಯಬಹುದಾಗಿದೆ. ಜಿಲ್ಲೆಯಾದ್ಯಂತ ಆಯೋಜಿಸುವ ಕಾರ್ಯಕ್ರಮಗಳ ವರದಿಗಳನ್ನು ಎನ್‌ಎಂಬಿಎ (NBA) ಮೊಬೈಲ್ ಪ್‌ನಲ್ಲಿ ಅಪ್‌ಲೋಡ್ ಮಾಡಬೇಕು. ಅಲ್ಲದೆ, ಕಾರ್ಯಕ್ರಮಗಳ ವಿವರ ಹಾಗೂ ವರದಿ ಕಳುಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಾಲಕರ ವಸತಿ ನಿಲಯದ ನೂತನ ಕಟ್ಟಡದ ಉದ್ಘಾಟನೆ । ಶಾಸಕ ವಿಠ್ಠಲ ಕಟಕಧೋಂಡ ಭರವಸೆ

## ವಿವಿಧ ಅಭಿವೃದ್ಧಿ ಕಾಮಗಾರಿಗಳ ಆರಂಭಕ್ಕೆ ಶೀಘ್ರ ಕ್ರಮ

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಹಾಗೂ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಸಮಾಜ ಕಲ್ಯಾಣ ಇಲಾಖೆ, ಇಂಡಿ/ಚಡಚಣ ಇವರ ಸಹಯೋಗದಲ್ಲಿ ಚಡಚಣ ತಾಲೂಕಿನ ಧೂಳಖೇಡಶಿರನಾಳ ವ್ಯಾಪ್ತಿಯಲ್ಲಿ ನಿರ್ಮಿಸಲಾಗಿರುವ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ ಶುಕ್ರವಾರ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಾಗಠಾಣ ಶಾಸಕ ವಿಠ್ಠಲ ಕಟಕಧೋಂಡ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಎಲ್ಲರೂ ಶಿಕ್ಷಣವಂತರಾಗಬೇಕು ಎಂಬುದು ನಮ್ಮ ಗುರಿಯಾಗಿದೆ. ನನ್ನ ಅವಧಿಯಲ್ಲಿ ಈ ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸಿದ್ದು, ಇಂದು ನನ್ನ ಕೈಯಿಂದಲೇ ಉದ್ಘಾಟನೆ ಮಾಡುವ ಭಾಗ್ಯ ದೊರೆತಿ–ರುವುದು ಸಂತೋಷದ ಸಂಗತಿ ಎಂದ ಅವರು, ಕ್ಷೇತ್ರದ ಪ್ರಮುಖ ರಸ್ತೆಗಳು ಹದಗೆಟ್ಟಿರುವುದನ್ನು ಗಮನಿಸಿದ್ದು, ಅವುಗಳ ದುರಸ್ತಿಗಾಗಿ ಸರ್ಕಾರದ ಗಮನ ಸೆಳೆಯಲಾಗಿದೆ. ರಸ್ತೆ ಕಾಮಗಾರಿಗಳ ಕು–ರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿದ್ದೇನೆ. ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಾದ ಅನುದಾನ ತರಲು ನಿರಂತರ ಪ್ರಯತ್ನ ಮಾಡುತ್ತಿದ್ದೇನೆ. ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ನಡುವೆಯೂ ಸರ್ಕಾರ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುತ್ತಿದೆ ಎಂದು ಹೇಳಿದರು.

ವಿದ್ಯುತ್ ಸಮಸ್ಯೆ ನಿವಾರಣೆಗಾಗಿ ಚಡಚಣ ಪಟ್ಟಣಕ್ಕೆ 220 ಕೆ.ವಿ. ವಿದ್ಯುತ್ ಘಟಕ, ಈ ಭಾಗದಲ್ಲಿ 24 ಗಂಟೆಗಳ ಕಾಲ ವಿದ್ಯುತ್ ಪೂರೈಕೆಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಚಡಚಣ ತಾಲೂಕಿಗೆ ಅಗತ್ಯವಿರುವ ಪ್ರಜಾಸೌಧ, ನ್ಯಾಯಾಲಯ, ಬಸ್ ನಿಲ್ದಾಣ ಹಾಗೂ ಕ್ರೀಡಾಂಗಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಶೀಘ್ರದಲ್ಲೇ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ ಲಮಾಣಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮುಖಂಡ ಸುರೇಶಗೌಡ ಪಾಟೀಲ ಮಾತನಾಡಿ, 1995ರಲ್ಲಿ ಧೂಳಖೇಡ ಗ್ರಾಮದಲ್ಲಿ ದನದ ಕೊಟ್ಟಿಗೆಯಲ್ಲಿ ಆರಂಭವಾದ ವಸತಿ ನಿಲಯವು ಇಂದು ಬೃಹತ್ ಕಟ್ಟಡವಾಗಿ ರೂಪುಗೊಂಡಿರುವುದು ಹೆಮ್ಮೆಯ ಸಂಗತಿ. ಈ ಕಟ್ಟಡದಿಂದ 100 ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ಉತ್ತಮ ವಸತಿ ಸೌಲಭ್ಯ ದೊರೆಯಲಿದ್ದು, ಅವರ ಶಿಕ್ಷಣಕ್ಕೆ ಸಹಕಾ–ರಿಯಾಗಲಿದೆ, ಯಾವುದೆ ಅಹಿತಕರ ಘಟನೆ ಹಾಗೂ ಅಕ್ರಮಗಳಿಗೆ ಅವಕಾಶ ನೀಡದೆ ಒಳ್ಳೆಯ ಹೆಸರು ಬರುವಹಾಗೆ ನಡೆಯಿರಿಎಂದು ವಸತಿ ನಿಲಯದ ಅಧಿಕಾರಿ ಹಾಗೂ ಸಿಬ್ಬಂಧಿಗಳಿಗೆ ಹೇಳಿದರು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ರವಿದಾಸ ಜಾಧವ, ತಾ.ಪಂ. ಎಇಒ ಅಶೋಕಕುಮಾರ ರಾಠೋಡ, ಸಾಹೇಬಗೌಡ ಪಾಟೀಲ, ಫೇಣುಬರಾಯಗೌಡ ಪಾಟೀಲ, ತೌಫಿಕ್ ಕುಡ್ಲೆ, ಶಿವಾನಂದ ಮಠ, ಸೋಮುಗೌಡ ಪಾಟೀಲ, ರಾಯಗೊಂಡ ರಗಟೆ, ಶಿವಾನಂದ ಧೂಳಖೇಡ, ಬಾಪುರಾಯ ಏಳೆಗಾಂವ, ದಿಲೀಪ ಶಿವಶರಣ, ಕಲ್ಲಪ್ಪ ಗುಮತೆ, ಶ್ರೀಶೈಲ ಹಳ್ಳಿ, ಗುರುರಾಜ ಕುಲಕರ್ಣಿ, ಮಹೇಶ ಸೋಲಕಂರ, ಅಶೋಕ ತಳವಾರ, ಸಂಗನಬಸವ ನಾಗಣಸೂರ, ಇಂಜಿನಿಯರ ಬಸವರಾಜ, ಲಕ್ಷ್ಮಣ ಕೊಟೆ ಸೇರಿದಂತೆ ಅನೇಕರಿದ್ದರು.



**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR